ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

EMAIL : dairyadadaari@gmail.com

ಸಂಪುಟ: 01 ಸಂಚಿಕೆ: 157

ಬೆಲೆ ರೂ : 2.00

ರಾಯಚೂರು

ಪುಟ: 4

RNI NO: KNKAN/25/A2795

ಶನಿವಾರ: 30-05-2026


# ಆಪ್ತರ ಅತಿರೇಕದ ಹೇಳಿಕೆಗಳಿಂದ ಸಿಎಂ ಕುರ್ಚಿ ಕೈ ತಪ್ಪಿತೇ..?

ಬೆಂಗಳೂರು, ಮೇ 29- ತಮ್ಮ ರಾಜಕೀಯ ಅಸ್ತಿತ್ವಕ್ಕಾಗಿ ಸಿದ್ದರಾಮಯ್ಯ ಅವರ ಪರವಾಗಿ ಅಗತ್ಯಕ್ಕಿಂತಲೂ ಹೆಚ್ಚು ಮಾತನಾಡಿ, ಕೆಲ ಆಪ್ತರೇ ದುರ್ಗತಿಯ ಸನ್ನಿವೇಶವನ್ನು ಸೃಷ್ಟಿಸಿದ್ದಾರೆ ಎಂಬ ಹಿಡೀ ಶಾಪ ಆಪ್ತರ ಬಣದಲ್ಲಿ ಕೇಳಿ ಬರುತ್ತಿದೆ. ಜಮೀರ್ ಅಹಮದ್‌ಖಾನ್, ಕೆ.ಎನ್.ರಾಜಣ್ಣ, ಸತೀಶ್ ಜಾರಕಿಹೊಳಿ, ಬಸವರಾಜರಾಯ ರೆಡ್ಡಿ, ಸಿದ್ದರಾಮಯ್ಯ ಅವರ ಪುತ್ರ ಡಾ.ಯತೀಂದ್ರ ಸೇರಿದಂತೆ ಕೆಲವರು ಅನಗತ್ಯವಾಗಿ ಪದೇ ಪದೇ ನಾಯಕತ್ವದ ವಿವಾದವನ್ನು ಕೆಣಕಿ ಡಿ.ಕೆ.ಶಿವಕುಮಾರ್ ಬಣವನ್ನು ರೊಚ್ಚಿಗೆಬ್ಬಿಸಿದರು.



ಡಿ.ಕೆ.ಶಿವಕುಮಾರ್‌ರವರು ತಮ್ಮ ಪರವಾಗಿ ಮಾತನಾಡುತ್ತಿದ್ದ ಕೆಲ ಶಾಸಕರುಗಳಿಗೆ ಪಕ್ಷದ ವತಿಯಿಂದ ನೋಟೀಸ್ ಜಾರಿ ಮಾಡಿ ಕಡಿವಾಣ ಹಾಕಿದ್ದರು. ಒಳಗೊಳಗೆ ಯಾವುದೇ ರೀತಿಯ ಕುಮಕ್ಕು ಕೊಟ್ಟಿದ್ದರೂ ಬಹಿರಂಗವಾಗಿ ಹೇಳಿಕೆ ನೀಡಿ, ಪಕ್ಷಕ್ಕೆ ಹಾನಿ ಮಾಡುವವರ ವಿರುದ್ಧ ಡಿ.ಕೆ.ಶಿವಕುಮಾರ್ ನಿಷ್ಠೂರವಾಗಿ ಗದರುತ್ತಿದ್ದರು.

ಆದರೆ ಇದೇ ರೀತಿಯ ನಿಯಂತ್ರಣ ಸಿದ್ದರಾಮಯ್ಯ ಅವರಿಂದ ಕಂಡು ಬರಲಿಲ್ಲ. ಕೆ.ಎನ್.ರಾಜಣ್ಣ, ಡಿ.ಕೆ.ಶಿವಕುಮಾರ್ ಅವರ ವಿರುದ್ಧ ವ್ಯಕ್ತಿಗತವಾಗಿ ಟೀಕೆ ಮಾಡಿ, ಸಡ್ಡು ಹೊಡೆದಾಗಲೂ ಸಿದ್ದರಾಮಯ್ಯ ಒಂದು ಮಾತನ್ನು ಆಡಲಿಲ್ಲ. ಒಂದು ಹಂತದಲ್ಲಿ ರಾಜಣ್ಣ ಅವರ ಜೊತೆ ಹೊಂದಾಣಿಕೆ ಮಾಡಿಕೊಳ್ಳಲು ಡಿ.ಕೆ.ಶಿವಕುಮಾರ್, ತಾವಾಗಿಯೇ ರಾಜಣ್ಣ ಅವರ ಕಚೇರಿ ಬಾಗಿಲಿಗೆ ಹೋದಾಗಲು ಕೈಗೆ ಸಿಗದೇ ತಪ್ಪಿಸಿಕೊಳ್ಳುವ ಮೂಲಕ ಉದ್ಧಟತನ ಪ್ರದರ್ಶಿಸಿದರು.

ಡಿ.ಕೆ.ಶಿವಕುಮಾರ್ ಅವರು ಹಲವಾರು ಬಾರಿ ರಾಜಣ್ಣ ಹೇಳಿಕೆಗಳ ಕುರಿತು ಅವುಡುಗಚ್ಚಿ, ತಾಳೆಯಿಂದಲೇ ಮೃದುವಾದ ಪ್ರತಿಕ್ರಿಯೆಗಳನ್ನು ನೀಡಿ ತೇಲಿಸುವ ಪ್ರಯತ್ನ ಮಾಡುತ್ತಿದ್ದರು. ಆದರೆ ಸಿದ್ದರಾಮಯ್ಯ ಅವರ ಬೆಂಬಲ ಇದೆ ಎಂಬ ಕಾರಣಕ್ಕಾಗಿ ರಾಜಣ್ಣ ಕೆಲವು ಸಂದರ್ಭಗಳಲ್ಲಿ ಗಡಿ ಮೀರಿ ಮಾತನಾಡಿದ್ದೂ ಇದೆ.

ಇದಕ್ಕೂ ಮೊದಲು 2019ರಲ್ಲಿ ಜೆಡಿಎಸ್-ಬಿಜೆಪಿ ಸಮಿಶ್ರ ಸರ್ಕಾರವಿದ್ದಾಗ ಡಾ.ಜಿ.ಪರಮೇಶ್ವರ್ ಉಪ ಮುಖ್ಯಮಂತ್ರಿಯಾಗಿದ್ದರು. ಇದೇ ರಾಜಣ್ಣ, ಪರಮೇಶ್ವರ್ ವಿರುದ್ಧ ಜೀರೊ ಟ್ರಾಫಿಕ್ ಸಚಿವ ಎಂಬ ವ್ಯಂಗ್ಯದ ಜೊತೆಗೆ ಅವಾಚ್ಯ ಶಬ್ದಗಳನ್ನು ಬಳಿಸಿ ನಿಂದಿಸಿದ್ದರು. ಅದೇ ಸಂದರ್ಭದಲ್ಲಿ ಸಮಿಶ್ರ ಸರ್ಕಾರ ಸಮನ್ವಯ ಸಮಿತಿ ಅಧ್ಯಕ್ಷರಾಗಿದ್ದ ಸಿದ್ದರಾಮಯ್ಯ ಅವರ ವಿರುದ್ಧ ಕಾಂಗ್ರೆಸ್ ಶಾಸಕ ರೋಷನ್ ಬೇಗ್, ಕೆಲ ವಿಚಾರಗಳಿಗೆ ಟೀಕೆ ಮಾಡಿದ್ದರು.

ಸಿದ್ದರಾಮಯ್ಯ ಅವರು ಹೈಕಮಾಂಡ್ ಮೇಲೆ ಪ್ರಭಾವ ಬೀರಿ ರೋಷನ್ ಬೇಗ್ ಅವರನ್ನು ಪಕ್ಷದಿಂದ ಹೊರ ಹಾಕಿಸುವಲ್ಲಿ ಯಶಸ್ವಿಯಾಗಿದ್ದರು. ಅದೇ ಪ್ರಭಾವದಲ್ಲಿ ರಾಜಣ್ಣ ಅವರನ್ನು ರಕ್ಷಣೆ ಮಾಡಿಕೊಂಡಿದ್ದರು.

ಈವರೆಗೂ ಪಕ್ಷದಲ್ಲಿ ಮೂಲ ಕಾಂಗ್ರೆಸಿಗರು ಹೇಳಿಕೆ ನೀಡುವಾಗ ಅಳೆದು-ತೂಗಿ ಮಾತನಾಡುತ್ತಾರೆ. ಆದರೆ ವಲಸೆ ಬಂದ ನಾಯಕರು ಎಗ್ಗಿಲ್ಲದೆ ತಮಗೆ ತೋಚಿದ್ದನ್ನ ಹೇಳಿ ಗೊಂದಲ ಮೂಡಿಸುತ್ತಿದ್ದಾರೆ ಎಂಬ ಆರೋಪಗಳಿವೆ. ವೈಯಕ್ತಿಕ ಹಿತಾಸಕ್ತಿಗಷ್ಟೆ ಆದ್ಯತೆ ನೀಡುವ ಹೇಳಿಕೆಗಳು ಪಕ್ಷದ ಮೇಲೆ ಭಾರಿ ಪರಿಣಾಮ ಬೀರಿರುವ ಹಲವಾರು ಸಂದರ್ಭಗಳಿವೆ.2013 ರಿಂದ 2018ರ ನಡುವೆ ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿದ್ದಾಗ ತಮದೇ ಆದ ಪಟಾಲಮ್ ಅನ್ನು ಬೆಳೆಸಿಕೊಂಡಿದ್ದರು. 2023ರ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಸ್ಪಷ್ಟ ಬಹುಮತ ಬಂದಾಗ ಅದೇ ಪಟಾಲಮ್ ಮುಂದೆ ಬಂದು ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿಯಾಗಬೇಕೆಂದು ಬಹಿರಂಗ ಹೇಳಿಕೆಗಳನ್ನು ನೀಡಲಾರಂಭಿಸಿತು. 2ನೇಪುಟಕ್ಕೆ

## ಭಾರತದಲ್ಲಿ ಈ ಬಾರಿ ಮಳೆ ಪ್ರಮಾಣದಲ್ಲಿ ಕುಸಿತ : ಹವಾಮಾನ ಇಲಾಖೆ



**ನವದೆಹಲಿ, ಮೇ 29-** ಭಾರತದಲ್ಲಿ ಈ ವರ್ಷದ ನೈಋತ್ಯ ಮಾನ್ಸೂನ್ ಮಳೆಯು ದೀರ್ಘಾವಧಿಯ ಸರಾಸರಿಯ ಶೇಕಡಾ 90 ರಷ್ಟಾಗುವ ನಿರೀಕ್ಷೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ.

ಈ ಮಾನ್ಸೂನ್ ಋತುವಿನಲ್ಲಿ ಈಶಾನ್ಯವು ಸಾಮಾನ್ಯ ಮಳೆಯಾಗುವ ಸಾಧ್ಯತೆಯಿದ್ದರೂ, ದೇಶದ ಉಳಿದ ಭಾಗಗಳಲ್ಲಿ ಸಾಮಾನ್ಯಕ್ಕಿಂತ ಕಡಿಮೆ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಕಚೇರಿ ತಿಳಿಸಿದೆ.

ನೈಋತ್ಯ ಮಾನ್ಸೂನ್‌ನ ಎರಡನೇ ಮುನ್ಸೂಚನೆಯಲ್ಲಿ ಭಾರತೀಯ ಹವಾಮಾನ ಇಲಾಖೆ ಈ ಅವಲೋಕನಗಳನ್ನು ಮಾಡಿದೆ. ಏಪ್ರಿಲ್ 13 ರಂದು ತನ್ನ ಮೊದಲ ಮುನ್ಸೂಚನೆಯಲ್ಲಿ, ಈ ಮಾನ್ಸೂನ್ ಋತುವಿನಲ್ಲಿ ಭಾರತವು ದೀರ್ಘಾವಧಿಯ ಸರಾಸರಿ (ಎಲ್‌ಪಿಎ) ಮಳೆಯ ಶೇಕಡಾ 92 ರಷ್ಟು ಮಳೆಯನ್ನು ವೀಕ್ಷಿಸಬಹುದು ಎಂದು ಹವಾಮಾನ ಕಚೇರಿ ಹೇಳಿತ್ತು.

## ಯಾಪಲದಿನ್ನಿಯಲ್ಲಿ ವಿಶ್ವ ಋತುಚಕ್ರ ನೈರ್ಮಲ್ಯ ದಿನಾಚರಣೆ



ಧೈರ್ಯದ ದಾರಿ

**ರಾಯಚೂರು ಜೂನ್ 29:** ತಾಲೂಕಿನ ಯಾಪಲದಿನ್ನಿ ಹಳೆಯ ಗ್ರಾಮ ಪಂಚಾಯತ್ ಸಭಾಂಗಣದಲ್ಲಿ ವಿಶ್ವ ಋತುಚಕ್ರ ನೈರ್ಮಲ್ಯ ದಿನಾಚರಣೆ ಕಾರ್ಯಕ್ರಮವನ್ನು ಸ್ವಾಮಿ ವಿವೇಕಾನಂದ ಯೂಥ್ ಮೂವ್‌ಮೆಂಟ್ (WASH), ಲಿಂಡ್ಸ್ಟ್ರೋಮ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲೂಕು ಪಂಚಾಯತ್ ರಾಯಚೂರು, ಸಂಜೀವಿನಿ ಮಹಿಳಾ ಒಕ್ಕೂಟ NRLM ಯಾಪಲದಿನ್ನಿ ಇವರ ಸಹಯೋಗದಲ್ಲಿ ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿ ಹಾಗೂ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ್ದ ಜಿಲ್ಲಾ ಕುಟುಂಬ ಕಲ್ಯಾಣ ಇಲಾಖೆಯ ಆಶಾ ಮೇಲ್ವಿಚಾರಕರಾದ ಶ್ರೀಮತಿ ಕೃಷ್ಣವೇಣಿ ಅವರು ಮಾತನಾಡಿ, "ಮಹಿಳೆಯರಲ್ಲಿ ಋತುಸ್ರಾವದ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ವಿಶ್ವ ಮಟ್ಟದಲ್ಲಿ ಈ ದಿನಾಚರಣೆ ಆಚರಿಸಲಾಗುತ್ತಿದೆ. ಇಂದಿಗೂ ಅನೇಕ ಮಹಿಳೆಯರು ಮುಟ್ಟಿನ ದಿನಗಳಲ್ಲಿ ನೈರ್ಮಲ್ಯ ಕಾಪಾಡಿಕೊಳ್ಳಲು ಅಗತ್ಯ ಸೌಲಭ್ಯಗಳಿಂದ ವಂಚಿತರಾಗಿದ್ದಾರೆ. ಶೌಚಾಲಯ, ಶುದ್ಧ ನೀರು, ಸ್ಯಾನಿಟರಿ ಪ್ಯಾಡ್‌ಗಳ ಕೊರತೆ ಹಾಗೂ ಮುಜುಗರದ ಕಾರಣದಿಂದ ಆರೋಗ್ಯ ಸಮಸ್ಯೆಗಳು ಎದುರಾಗುತ್ತಿವೆ. ಮಹಿಳೆಯರು ಮುಜುಗರ ಬಿಟ್ಟು ತಮ್ಮ ಆರೋಗ್ಯದ ಬಗ್ಗೆ ಜಾಗರೂಕರಾಗಬೇಕು" ಎಂದು ಹೇಳಿದರು.

ಅವರು ಮುಂದುವರಿಸಿ, "ಮುಟ್ಟಿನ ದಿನಗಳ ಅನೈರ್ಮಲ್ಯ ಹಲವು ಕಾಯಿಲೆಗಳಿಗೆ ಕಾರಣವಾಗುತ್ತದೆ. ಆದ್ದರಿಂದ ಮಹಿಳೆಯರು ತಮ್ಮ ಅಗತ್ಯಗಳನ್ನು ಮುಕ್ತವಾಗಿ ಹೇಳಿಕೊಳ್ಳಬೇಕು. ಕಡಿಮೆ ಬೆಲೆಯ ಮರುಬಳಕೆ ಮಾಡಬಹುದಾದ ಸ್ಯಾನಿಟರಿ ಪ್ಯಾಡ್ ಹಾಗೂ ಮೆನ್ಸ್ಟುಯಲ್ ಕಪ್‌ಗಳ ಬಗ್ಗೆ ಅರಿವು ಬೆಳೆಸಿಕೊಳ್ಳುವುದು ಅಗತ್ಯ" ಎಂದರು.

ಸ್ವಾಮಿ ವಿವೇಕಾನಂದ ಯೂಥ್ ಮೂವ್‌ಮೆಂಟ್ ಸಂಸ್ಥೆಯ WASH ಕಾರ್ಯಕ್ರಮ ಸಂಯೋಜಕರಾದ ವಿನಾಯಕ ಆರ್ ಅವರು ಮಾತನಾಡಿ, "ಸಂಸ್ಥೆಯು ಕಳೆದ 14 ವರ್ಷಗಳಿಂದ ರಾಯಚೂರು ಜಿಲ್ಲೆಯಲ್ಲಿ ನೀರು, ನೈರ್ಮಲ್ಯ ಹಾಗೂ ಸ್ವಚ್ಛತೆ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ನಡೆಸುತ್ತಿದೆ. ಶಾಲೆಗಳು, ಅಂಗನವಾಡಿಗಳು ಹಾಗೂ ಸಮುದಾಯಗಳಲ್ಲಿ ಶುದ್ಧ ಕುಡಿಯುವ ನೀರು, ಶೌಚಾಲಯ ಬಳಕೆ ಮತ್ತು ಸ್ವಚ್ಛತೆ ಕುರಿತು ಅರಿವು ಮೂಡಿಸಲಾಗುತ್ತಿದೆ. ಮಹಿಳೆಯರ ಆರೋಗ್ಯದ ಪ್ರಮುಖ ಭಾಗವಾದ ಋತುಚಕ್ರ ನೈರ್ಮಲ್ಯದ ಕುರಿತು ವಿಶೇಷ ಮಾಹಿತಿ ನೀಡುವ ಉದ್ದೇಶದಿಂದ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ" ಎಂದು ತಿಳಿಸಿದರು.ತಾಲೂಕು ಪಂಚಾಯತ್‌ನ NRLM ಸಂಯೋಜಕರಾದ ನಾಗನಗೌಡ ಅವರು ಮಾತನಾಡಿ, "ಗ್ರಾಮೀಣ ಮಹಿಳೆಯರ ಸಬಲೀಕರಣಕ್ಕೆ ಸ್ವಸಹಾಯ ಸಂಘಗಳು ಹಾಗೂ ಒಕ್ಕೂಟಗಳು ಬಹಳ ಸಹಕಾರಿ. ಮಹಿಳೆಯರು ಆರೋಗ್ಯದ ದೃಷ್ಟಿಯಿಂದ ಋತುಸ್ರಾವದ ಸಮಯದಲ್ಲಿ ಸ್ವಚ್ಛತೆ ಕಾಪಾಡಿಕೊಳ್ಳುವುದು ಅತ್ಯಂತ ಮುಖ್ಯ" ಎಂದರು. ಕಾರ್ಯಕ್ರಮದಲ್ಲಿ ಯಾಪಲದಿನ್ನಿ ಗ್ರಾಮದ ಗೋವಿಂದು, ಯಾಪಲದಿನ್ನಿ ವಲಯದ MBK ಶ್ರೀಮತಿ ವೀಣಾ, SVYM£ ಗಂಗಾ, ಸಂಜೀವಿನಿ ಮಹಿಳಾ ಒಕ್ಕೂಟದ ಸದಸ್ಯರಾದ ನಸ್ರುನಿನ್ ಬೇಗಂ, ಲಿಂಗಪ್ಪ, ಆಶಾ ಕಾರ್ಯಕರ್ತೆಯರು, ಸ್ವಸಹಾಯ ಸಂಘದ ಮಹಿಳೆಯರು ಸೇರಿದಂತೆ ಹಲವರು ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಸುಧಾರಿತ ಮೆನ್ಸ್ಟುಯಲ್ ಕಪ್ ಬಳಕೆಯ ಕುರಿತು ವಿಶೇಷ ಮಾಹಿತಿ ನೀಡಲಾಯಿತು.

## ಬಸ್-ಟ್ರಾಕ್ಟರ್ ಅಪಘಾತ : ಸ್ವಲ್ಪರಲ್ಲಿ ಪಾರಾದ ಟ್ರಾಕ್ಟರ್ ಚಾಲಕ

ಧೈರ್ಯದ ದಾರಿ

**ಲಿಂಗಸುಗೂರು :** ಪಟ್ಟಣದ ಎಸ್‌ಎಲ್‌ವಿ ಹೋಟೆಲ್ ಮುಂಭಾಗ ಶುಕ್ರವಾರ ಬೆಳಿಗ್ಗೆ ಬಸ್ ಮತ್ತು ಟ್ರಾಕ್ಟರ್ ನಡುವೆ ಸಂಭವಿಸಿದ ಅಪಘಾತದಲ್ಲಿ ಟ್ರಾಕ್ಟರ್ ಪಲ್ಟಿಯಾದ ಘಟನೆ ನಡೆದಿದೆ.



ಗುಲಬರ್ಗಾ ರಸ್ತೆಯ ಕಡೆಗೆ ತೆರಳುತ್ತಿದ್ದ ಟ್ರಾಕ್ಟರ್‌ಗೆ ಹಿಂಬದಿಯಿಂದ ಬಂದ ಬಸ್ ಡಿಕ್ಕಿ ಹೊಡೆದ ಪರಿಣಾಮ ಟ್ರಾಕ್ಟರ್ ನಿಯಂತ್ರಣ ತಪ್ಪಿ ರಸ್ತೆ ಬದಿಗೆ ಪಲ್ಟಿಯಾಗಿದೆ ಎಂದು ತಿಳಿದು ಬಂದಿದೆ. ಅದೃಷ್ಟವಶಾತ್ ಟ್ರಾಕ್ಟರ್ ಚಾಲಕ ಸೇರಿ ಯಾರಿಗೂ ಪ್ರಾಣಾಪಾಯ ಸಂಭವಿಸಿಲ್ಲ. ಸ್ಥಳೀಯರು ತಕ್ಷಣ ಘಟನಾ ಸ್ಥಳಕ್ಕೆ ಧಾವಿಸಿ ಸಹಾಯ ಕಾರ್ಯ ನಡೆಸಿದರು.ಅಪಘಾತದ ಸುದ್ದಿ ತಿಳಿದ ತಕ್ಷಣ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಸಂಚಾರವನ್ನು ಕೆಲಕಾಲ ನಿಯಂತ್ರಿಸಿದರು. ಘಟನೆಗೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿ ಪೊಲೀಸ್ ತನಿಖೆಯಿಂದ ತಿಳಿದು ಬರಬೇಕಿದೆ.

## "ಶ್ರುತಿ-ಸಂಸ್ಕೃತಿ" ಕಾರ್ಯಕ್ರಮ: ವಿದ್ಯಾರ್ಥಿಗಳಿಗೆ ಸಂಸ್ಕೃತಿ, ಸಂಗೀತ ಮತ್ತು ಜೀವನ ಮೌಲ್ಯಗಳ ಅರಿವು



ಧೈರ್ಯದ ದಾರಿ

**ರಾಯಚೂರು:** ಟ್ಯಾಗೋರ್ ಸ್ಮಾರಕ ಶಿಕ್ಷಣ ಸಂಸ್ಥೆಯ ಎಸ್.ಆರ್.ಕೆ ಶಿಕ್ಷಣ ಮಹಾವಿದ್ಯಾಲಯ ರಾಯಚೂರು ಹಾಗೂ ಶೃತಿ ಸಾಹಿತ್ಯ ಮೇಳ ರಾಯಚೂರು ಇವರ ಸಹಯೋಗದಲ್ಲಿ "ಶ್ರುತಿ-ಸಂಸ್ಕೃತಿ" ಉಪನ್ಯಾಸ ಹಾಗೂ ಸಂಗೀತ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಹಾಗೂ ಭಾವಪೂರ್ಣವಾಗಿ ಆಯೋಜಿಸಲಾಯಿತು.

ವಿದ್ಯಾರ್ಥಿಗಳಲ್ಲಿ ಸಂಗೀತ, ಸಂಸ್ಕೃತಿ ಹಾಗೂ ಜೀವನ ಮೌಲ್ಯಗಳ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ವಿವಿಧ ಗಣ್ಯರು ಭಾಗವಹಿಸಿ ವಿದ್ಯಾರ್ಥಿಗಳಿಗೆ ಪ್ರೇರಣಾದಾಯಕ ಸಂದೇಶಗಳನ್ನು ನೀಡಿದರು.
ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಖ್ಯಾತ ಸಂಗೀತಗಾರರಾದ ಪಂಡಿತ್ ನರಸಿಂಹಲು ವಡವಾಟಿ ಅವರು, "ಪ್ರತಿಯೊಬ್ಬರಲ್ಲಿಯೂ ಸಹಜವಾದ ಪ್ರತಿಭೆ ಅಡಗಿದೆ. ಅದನ್ನು ಗುರುತಿಸಿ ಬೆಳೆಸಿಕೊಳ್ಳುವುದು ಅಗತ್ಯ. ಸಂಗೀತ ಮನಸ್ಸಿಗೆ ಶಾಂತಿ ನೀಡುವುದರ ಜೊತೆಗೆ ಏಕಾಗ್ರತೆಯನ್ನು ಹೆಚ್ಚಿಸುತ್ತದೆ" ಎಂದು ಹೇಳಿದರು.

ಇಂದಿನ ಯುವಜನತೆ ಮೊಬೈಲ್ ಬಳಕೆಯಲ್ಲಿ ಹೆಚ್ಚು ಸಮಯ ಕಳೆಯುತ್ತಿರುವುದರಿಂದ ಮನಸ್ಸಿನ ಏಕಾಗ್ರತೆ ಕುಗ್ಗುತ್ತಿದೆ. ಆದ್ದರಿಂದ ವಿದ್ಯಾರ್ಥಿಗಳು ಅನಗತ್ಯ ಮೊಬೈಲ್ ಬಳಕೆಯನ್ನು ಕಡಿಮೆ ಮಾಡಿ ತಮ್ಮ ಪ್ರತಿಭೆ, ಜ್ಞಾನ ಹಾಗೂ ವ್ಯಕ್ತಿತ್ವ ವಿಕಾಸದತ್ತ ಗಮನ ಹರಿಸಬೇಕು ಎಂದು ಸಲಹೆ ನೀಡಿದರು.
ಯಶಸ್ಸಿಗೆ ಶಿಸ್ತು, ಪರಿಶ್ರಮ ಹಾಗೂ ಆತ್ಮವಿಶ್ವಾಸ ಮುಖ್ಯವೆಂದು ತಿಳಿಸಿದರು.
ವಿಶೇಷ ಉಪನ್ಯಾಸಕರಾಗಿ ಆಗಮಿಸಿದ್ದ ಖ್ಯಾತ ವಿದ್ವಾಂಸರು ಹಾಗೂ ವಾಗ್ಮಿಗಳಾದ ಶ್ರೀ ವಿಜಯ ಸಿಂಹಾಚಾರ್ಯ ತೋಟಂತಿಲ್ಲಾಯ ಬೆಂಗಳೂರು ಅವರು "ಸಂಸ್ಕೃತಿ ಮತ್ತು ಸಂಸ್ಕಾರ" ವಿಷಯದ ಕುರಿತು ಆಳವಾದ ಉಪನ್ಯಾಸ ನೀಡಿದರು.

ಭಾರತೀಯ ಸಂಸ್ಕೃತಿ ಕೇವಲ ಆಚರಣೆಗಳಲ್ಲಿ ಮಾತ್ರವಲ್ಲದೆ ನಮ್ಮ ನಡೆ-ನುಡಿ, ಜೀವನ ಶೈಲಿ ಹಾಗೂ ಮೌಲ್ಯಗಳಲ್ಲಿ ಅಡಕವಾಗಿದೆ ಎಂದು ತಿಳಿಸಿದ ಅವರು, ವಿದ್ಯಾರ್ಥಿಗಳು ಕಲಿಕೆಯ ಮನೋಭಾವ ಬೆಳೆಸಿಕೊಳ್ಳಬೇಕು. ಶಿಕ್ಷಕರಿಂದ ಕಲಿಯುವುದರ ಜೊತೆಗೆ ಸ್ವತಃ ಅಧ್ಯಯನ ಮಾಡುವ ಅಭ್ಯಾಸ ರೂಢಿಸಿಕೊಳ್ಳಬೇಕು ಎಂದು ಹೇಳಿದರು.

ಸ್ವಾವಲಂಬನೆ ಮತ್ತು ಆತ್ಮಚಿಂತನೆ ವ್ಯಕ್ತಿಯ ಬೆಳವಣಿಗೆಗೆ ಅಗತ್ಯವಾಗಿದ್ದು, ಸಂಸ್ಕಾರ, ಮೌಲ್ಯಗಳು ಹಾಗೂ ಆತ್ಮವಿಶ್ವಾಸ ಇದ್ದರೆ ಯಾವುದೇ ಸವಾಲನ್ನು ಸಮರ್ಥವಾಗಿ ಎದುರಿಸಬಹುದು ಎಂದು ಹೇಳಿದರು.

ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ವಿರುಪಾಕ್ಷಿ ಬಿ.ಎಂ. ಪಾಟೀಲ್ ಅವರು ಮಾತನಾಡಿ, ಭಾರತೀಯ ಸಂಸ್ಕೃತಿ ನಮ್ಮ ಜೀವನದ ಅಮೂಲ್ಯ ಆಸ್ತಿಯಾಗಿದ್ದು, ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರಗಳನ್ನು ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು. ಶಿಸ್ತು, ಗೌರವ, ಮಾನವೀಯತೆ ಹಾಗೂ ನೈತಿಕ ಮೌಲ್ಯಗಳನ್ನು ಬೆಳೆಸಿಕೊಳ್ಳುವ ಅಗತ್ಯವನ್ನು ಒತ್ತಿ ಹೇಳಿದರು. ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ರಾಯಚೂರಿನ ಡಾ. ಬಿ. ವಿಜಯರಾಜೇಂದ್ರ ಅವರು ಕನ್ನಡ ನಾಡಿನ ಸಂಸ್ಕೃತಿ, ಪರಂಪರೆ ಹಾಗೂ ಸಾಹಿತ್ಯವು ನಮ್ಮ ಬದುಕಿಗೆ ದಾರಿದೀಪವಾಗಿವೆ ಎಂದು ಹೇಳಿದರು. ವಿದ್ಯಾರ್ಥಿಗಳು ತಮ್ಮ ಮಾತೃಭಾಷೆ, ಸಂಸ್ಕೃತಿ ಹಾಗೂ ಪರಂಪರೆಯನ್ನು ಗೌರವದಿಂದ ಕಾಪಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಟ್ಯಾಗೋರ್ ಸ್ಮಾರಕ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಶ್ರೀ ಆರ್.ಕೆ. ಅಮರೇಶ್ ಅವರು, "ಇಂದಿನ ಆಧುನಿಕ ಯುಗದಲ್ಲಿ ಶಿಕ್ಷಣದ ಜೊತೆಗೆ ಭಾರತೀಯ ಸಂಸ್ಕೃತಿ ಮತ್ತು ನೈತಿಕ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದು ಅತ್ಯಗತ್ಯ" ಎಂದು ಹೇಳಿದರು.
ವಿದ್ಯಾರ್ಥಿಗಳು ಪಾಠಪುಸ್ತಕದ ಜ್ಞಾನಕ್ಕೆ ಮಾತ್ರ ಸೀಮಿತವಾಗದೆ ಉತ್ತಮ ವ್ಯಕ್ತಿತ್ವ, ಶಿಸ್ತು, ವಿನಯ ಹಾಗೂ ಸಮಾಜದತ್ತ ಜವಾಬ್ದಾರಿಯ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಅವರು ಕರೆ ನೀಡಿದರು. ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ವರ್ಗದವರು ಹಾಗೂ ಪ್ರಥಮ ಮತ್ತು ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿಗಳು ಭಾಗವಹಿಸಿದ್ದರು.
ಕಾರ್ಯಕ್ರಮಕ್ಕೆ ಕು. ವಾಸುಕಿ ತಂಡದವರು ಪ್ರಾರ್ಥನಾ ಗೀತೆ ಹಾಡುವ ಮೂಲಕ ಚಾಲನೆ ನೀಡಿದರು. ಸ್ವಾಗತ ಭಾಷಣವನ್ನು ಶ್ರೀ ವೀರೇಶ್ ನೆರವೇರಿಸಿದರು. ಡಾ. ಸವಿತಾ ಡಿ ಅವರು ವಂದನಾರ್ಪಣೆ ಸಲ್ಲಿಸಿದರು. ಕಾರ್ಯಕ್ರಮವನ್ನು ಶ್ರೀ ಮುರಳಿಧರ್ ಕುಲಕರ್ಣಿ ನಿರೂಪಿಸಿದರು.

ಮೊದಲನೇ ಪುಟದಿಂದ

# ಆಪ್ತರ ಅತಿರೇಕದ ಹೇಳಿಕೆಗಳಿಂದ ಸಿಎಂ ಕುರ್ಚಿ ಕೈ ತಪ್ಪಿತೇ..?

ಮೂಲ ಕಾಂಗ್ರೆಸಿಗರು ಹೈಕಮಾಂಡ್ ನಿರ್ಧಾರಕ್ಕೆ ಬದ್ಧ ಎಂದು ಹೇಳಿ ತಮ ಪಾಡಿಗೆ ತಾವಿದ್ದಾಗ, ವಲಸಿಗ ನಾಯಕರು ಮಾತ್ರ ಸಿದ್ದರಾಮಯ್ಯ ಅವರ ಪರವಾಗಿ ಜೋರು ಧ್ವನಿ ಮಾಡುತ್ತಿದ್ದರು. ಸಿದ್ದರಾಮಯ್ಯ ಅವರನ್ನು ಬಿಟ್ಟರೆ ಕಾಂಗ್ರೆಸ್ ನಿರ್ನಾಮವಾಗಲಿದೆ. ಪಕ್ಷಕ್ಕೆ ಸ್ಪಷ್ಟ ಬಹುಮತ ಬರಲು ಸಿದ್ದರಾಮಯ್ಯ ಅವರೇ ಕಾರಣ ಎಂದು ಬಿಂಬಿಸಿ ಜನ ಮಾನಸದಲ್ಲಿ ಸಿದ್ದರಾಮಯ್ಯ ಅವರ ಮೇಲಿನ ಅಭಿಮಾನ ನೂರ್ಮಡಿಸುವಂತೆ ಮಾಡಿದ್ದರು.

ಕೆಲವರಂತೂ ಒಂದು ಹೆಜ್ಜೆ ಮುಂದೆ ಹೋಗಿ, 2023ಕ್ಕಷ್ಟೆ ಅಲ್ಲ 2028ಕ್ಕೂ ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿಯಾಗಲಿ ಎಂದು ಪ್ರತಿಪಾದಿಸಿದರು. ಜಮೀರ್ ಅಹಮದ್ ಖಾನ್ ಅವರು ಹಲವು ಬಾರಿ ಹೇಳಿಕೆ ನೀಡಿ, ಸಿದ್ದರಾಮಯ್ಯ ಹುಲಿ ಇದ್ದಂತೆ, 5 ವರ್ಷ ಅವರನ್ನು ಯಾರೂ ಅಲುಗಾಡಿಸಲು ಸಾಧ್ಯವಿಲ್ಲ ಎಂದು ಪದೇ ಪದೇ ಹೇಳುತ್ತಿದ್ದರು.

ಆಗ ಸಹಕಾರ ಸಚಿವರಾಗಿದ್ದ ಕೆ.ಎನ್.ರಾಜಣ್ಣ ಇಲಾಖೆಯ ಕೆಲಸ ಮಾಡಿದ್ದಕ್ಕಿಂತಲೂ ಹೆಚ್ಚಾಗಿ ಸಿದ್ದರಾಮಯ್ಯ ಅವರ ಪರವಾಗಿ ವಕಾಲತ್ತು ವಹಿಸುತ್ತಿದ್ದರು. ಅಷ್ಟಕ್ಕೆ ನಿಲ್ಲದೇ ಡಿ.ಕೆ.ಶಿವಕುಮಾರ್ ಅವರ ನಾಯಕತ್ವಕ್ಕೂ ಸವಾಲು ಎಸೆಯುವಂತೆ, ಒಬ್ಬರಿಗೆ ಒಂದೇ ಹುದ್ದೆ ಎಂಬ ಸಿದ್ಧಾಂತದ ಅಡಿ ಕೆಪಿಸಿಸಿ ಅಧ್ಯಕ್ಷ ಸ್ಥಾನವನ್ನು ಬೇರೆಯವರಿಗೆ ಬಿಟ್ಟುಕೊಡಬೇಕು ಎಂದು ವಾದಿಸುತ್ತಿದ್ದರು.

ಲೋಕಸಭೆ ಚುನಾವಣೆಗೂ ಮುನ್ನ ಜಾತಿಗೆ ಒಬ್ಬರಂತೆ ಉಪ ಮುಖ್ಯಮಂತ್ರಿ ಮಾಡಬೇಕು. ಕನಿಷ್ಠ ದಲಿತ, ಲಿಂಗಾಯತ, ಅಲ್ಪಸಂಖ್ಯಾತ ಮತ್ತು ಪರಿಶಿಷ್ಟ ಪಂಗಡದ ಒಬ್ಬ ನಾಯಕನಿಗೆ ಉಪ ಮುಖ್ಯಮಂತ್ರಿಯಾಗಲು ಅವಕಾಶ ನೀಡಬೇಕೆಂದು ಹೈಕಮಾಂಡ್‌ಗೆ ಒತ್ತಾಯಿಸಿದ್ದರು. ಇದು ಒಂದು ಹಂತದಲ್ಲಿ ಭಾರಿ ಗೊಂದಲವನ್ನು ಸೃಷ್ಟಿಸಿತ್ತು.

ಬಸವರಾಜರಾಯರೆಡ್ಡಿ ಅವರು, ಸಿದ್ದರಾಮಯ್ಯ ಅವರನ್ನು ಬದಲಾವಣೆ ಮಾಡುವುದು ಅಷ್ಟು ಸುಲಭವಲ್ಲ, ಶಾಸಕಾಂಗ ಸಭೆಯಲ್ಲಿ ಸಿದ್ದರಾಮಯ್ಯ ಸರ್ವಾನುಮತದಿಂದ ಆಯ್ಕೆಯಾಗಿದ್ದಾರೆ. ಅವರನ್ನು ಪದಚ್ಯುತಗೊಳಿಸಬೇಕಾದರೂ ಶಾಸಕಾಂಗ ಸಭೆಯಲ್ಲೆ ನಿರ್ಣಯವಾಗಬೇಕೆಂದು ಪದೇ ಪದೇ ಸವಾಲಿನ ಧಾಟಿಯಲ್ಲಿ ಮಾತನಾಡುತ್ತಿದ್ದರು.

ಈ ಹೇಳಿಕೆಗಳು ಡಿ.ಕೆ.ಶಿವಕುಮಾರ್ ಅವರ ಕೋಪವನ್ನು ಹೆಚ್ಚಿಸುತ್ತಿದ್ದರೂ ತಾಳೆಯಿಂದಲೇ ಎಲ್ಲದ್ದಕ್ಕೂ ಮೌನವಾಗಿ ಪ್ರತಿಕ್ರಿಯಿಸುತ್ತಿದ್ದದ್ದು ಕಂಡು ಬಂತು.ಹೊರಗೆ ಏನೂ ಮಾತನಾಡದೇ ಇದ್ದರೂ, ಒಳಗೆ ಡಿ.ಕೆ.ಶಿವಕುಮಾರ್ ತಮದೇ ಆದ ಕಾರ್ಯತಂತ್ರ ರೂಪಿಸುತ್ತಿದ್ದರು. ಸಿದ್ದರಾಮಯ್ಯ ಅವರ ಬಣ ಎಷ್ಟೆಲ್ಲಾ ಪ್ರತ್ಯೇಕ ಸಭೆಗಳನ್ನು ನಡೆಸಿ ಚರ್ಚೆ ಮಾಡಿದ್ದರೂ, ಅದು ಫಲ ನೀಡಲಿಲ್ಲ. ಡಿ.ಕೆ.ಶಿವಕುಮಾರ್ ಅವರ ತಣ್ಣನೆಯ ಕಾರ್ಯತಂತ್ರ ಕೊನೆಗೂ ಯಶಸ್ವಿಯಾಗಿದೆ.

ಸಿದ್ದರಾಮಯ್ಯ ಅವರು ನಿನ್ನೆ ನೀಡಿದ ರಾಜೀನಾಮೆಯನ್ನು ರಾಜ್ಯಪಾಲರು ಇಂದು ಅಂಗೀಕರಿಸಿದ್ದಾರೆ. ಸಿದ್ದರಾಮಯ್ಯ ಅವರ ಆಡಳಿತದ ಯುಗಾಂತ್ಯವಾಗಿದೆ. ಕಾಂಗ್ರೆಸ್‌ಗೆ ಬಂದು 20 ವರ್ಷ ಕಳೆದಿದ್ದು ಅದರಲ್ಲಿ 17 ವರ್ಷ ಸಿದ್ದರಾಮಯ್ಯ ಒಂದಲ್ಲ ಒಂದು ಅಧಿಕಾರದಲಿದ್ದರು. ಮುಂದೆ ಅವರಿಗೆ ಯಾವ ರೀತಿಯ ಸ್ಥಾನಮಾನ ನೀಡಲಾಗುತ್ತದೆ ಎಂಬುದು ಕುತೂಹಲ ಕೆರಳಿಸಿದೆ. ಈವರೆಗೂ ಪ್ರತಿಯೊಂದಕ್ಕೂ ಸಿದ್ದರಾಮಯ್ಯ ಅವರನ್ನು ಓಲೈಕೆ ಮಾಡುತ್ತಿದ್ದ ಪಟಾಲಮ್ ಮುಂದೆ ಯಾವ ನಡೆ ಅನುಸರಿಸುತ್ತದೆ ಎಂಬುದನ್ನೂ ಕೂಡ ಕಾದು ನೋಡಬೇಕಿದೆ.

# ನಿವೃತ್ತಿ ಸೈನಿಕರಿಂದ ಜೂನ್ .06ರವರೆಗೆ ನೇರ ಸಂದರ್ಶನ

**ರಾಯಚೂರು ಮೇ 29.** : ರಾಜ್ಯದ ವಿವಿಧ ಕಾರಾಗೃಹಗಳಲ್ಲಿ ಮಾಜಿ ಸೈನಿಕರನ್ನು ಗುತ್ತಿಗೆ ಆಧಾರದ ಮೇಲೆ ಕಾರಾಗೃಹ ಮತ್ತು ಸುಧಾರಣಾ ಸೇವಾ ಇಲಾಖೆಗೆ ಸಂದರ್ಶನ ಮೂಲಕ ನೇಮಕಾತಿ ನಡೆಸುತ್ತಿದ್ದು, ಆಸಕ್ತರು ದಿನಾಂಕ: 29-05-2026 ರಿಂದ 6-06-2026ರವರೆಗೆ ಬೆಳಿಗ್ಗೆ 10 ರಿಂದ ಸಂಜೆ 5ರವರೆಗೆ ಸಂದರ್ಶನ ಭಾಗವಹಿಸಬಹುದಾಗಿದೆ.

ಈ ಸಂದರ್ಶನದಲ್ಲಿ ಭಾಗವಹಿಸಲು ಆಸಕ್ತಿಯುಳ್ಳ ಮಾಜಿ ಸೈನಿಕರು ತಮ್ಮ ಗುರುತಿನ ಚೀಟಿ ಮತ್ತು ಸೇನಾ ಸೇವಾ ಪುಸ್ತಕಗಳೊಂದಿಗೆ ಸಂದರ್ಶನದಕ್ಕೆ ಹಾಜರಾಗಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಪಿ.ಎಸ್.ರಮೇಶ, ಉಪ ನಿರ್ದೇಶಕರು ಹಾಗೂ ಬಂದೀಖಾನೆಗಳ ಮುಖ್ಯ ಅಧೀಕ್ಷಕರು ಕರ್ನಾಟಕ ಕಾರಾಗೃಹ ಮತ್ತು ಸುಧಾರಣಾ ಸೇವೆಗಳ ಅಕಾಡೆಮಿ, ಕಾಳಿದಾಸ ರಸ್ತೆ, ಗಾಂಧಿನಗರ, ಮಹಾಬೋಧಿ ಸೊಸೈಟಿಯ ಪಕ್ಕ ಫ್ರೀಡಂ ಪಾರ್ಕ್ ಬೆಂಗಳೂರು ಮೊಬೈಲ್ ಸಂಖ್ಯೆ: 9632496560 ಅಥವಾ 9480806400 ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಕಲಬುರ್ಗಿಯ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈತರಿಗೆ ಡಿಸೇಲ್, ರಸಗೊಬ್ಬರ, ಬೀಜ ಕೊರತೆ ತಡೆಗೆ ಕ್ರಮ ಕೈಗೊಳ್ಳುವಂತೆ ಮನವಿ



ಧೈರ್ಯದ ದಾರಿ

**ಲಿಂಗಸುಗೂರು :** ಮುಂಗಾರು ಹಂಗಾಮಿನ ಕೃಷಿ ಚಟುವಟಿಕೆಗಳು ಆರಂಭವಾಗಿರುವ ಹಿನ್ನೆಲೆಯಲ್ಲಿ ಲಿಂಗಸುಗೂರು ಹಾಗೂ ಮಸ್ಕಿ ತಾಲೂಕಿನ ರೈತರಿಗೆ ಡಿಸೇಲ್, ರಸಗೊಬ್ಬರ, ಬಿತ್ತನೆ ಬೀಜ ಮತ್ತು ಬೆಳೆ ವಿಮೆ ಸಂಬಂಧಿತ ತೊಂದರೆಗಳು ಉಂಟಾಗದಂತೆ ತಕ್ಷಣ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ರೈತ ಬಾಂಧವರು ಸಹಾಯಕ ಆಯುಕ್ತರಿಗೆ ಮನವಿ ಸಲ್ಲಿಸಿದರು.

ಮಳೆ ಆರಂಭವಾಗಿರುವುದರಿಂದ ರೈತರು ಜಮೀನುಗಳನ್ನು ಸಿದ್ಧಪಡಿಸಿ ಬಿತ್ತನೆ ಕಾರ್ಯಕ್ಕೆ ಮುಂದಾಗಿದ್ದಾರೆ. ಆದರೆ ಡಿಸೇಲ್ ಕೊರತೆಯಿಂದ ಕೃಷಿ ಚಟುವಟಿಕೆಗಳಿಗೆ ತೀವ್ರ ತೊಂದರೆ ಉಂಟಾಗಿದೆ, ಬಂಕ್‌ಗಳಲ್ಲಿ ಕ್ಯಾನ್‌ನಲ್ಲಿ ಡಿಸೇಲ್ ನೀಡುವುದಿಲ್ಲ ಎಂದು ಹೇಳಲಾಗುತ್ತಿದ್ದು, ಟ್ರ್ಯಾಕ್ಟರ್‌ಗಳನ್ನು ನೇರವಾಗಿ ಬಂಕ್‌ಗೆ ತರಬೇಕು ಎಂಬ ನಿಯಮದಿಂದ ಗ್ರಾಮೀಣ ಭಾಗದ ರೈತರಿಗೆ ಸಂಕಷ್ಟ ಎದುರಾಗಿದೆ ಎಂದು ತಿಳಿಸಿದ್ದಾರೆ.

ಲಿಂಗಸುಗೂರು ಮತ್ತು ಮಸ್ಕಿ ತಾಲೂಕಿನ ಹಳ್ಳಿಗಳಿಂದ ಟ್ರ್ಯಾಕ್ಟರ್‌ಗಳನ್ನು ಪಟ್ಟಣಕ್ಕೆ ತಂದು ಡಿಸೇಲ್ ತುಂಬಿಸಿಕೊಳ್ಳುವುದು ಕಷ್ಟಕರವಾಗಿದೆ. ಆದ್ದರಿಂದ ರೈತರು ಕ್ಯಾನ್ ತಂದರೆ ಕನಿಷ್ಠ 50 ಲೀಟರ್ ಡಿಸೇಲ್ ನೀಡುವಂತೆ ಪೆಟ್ರೋಲ್ ಬಂಕ್ ಮಾಲೀಕರಿಗೆ ಸೂಚನೆ ನೀಡಬೇಕು ಎಂದರು.

ರಸಗೊಬ್ಬರ ಚೀಲಗಳ ತೂಕದಲ್ಲಿ ವ್ಯತ್ಯಾಸ ಕಂಡು ಬರುತ್ತಿದ್ದು, ಸಂಬಂಧಿಸಿದ ಅಧಿಕಾರಿಗಳು ಬೀಜ ಮತ್ತು ರಸಗೊಬ್ಬರ ಮಾರಾಟ ಏಜೆನ್ಸಿಗಳ ಮೇಲೆ ಪರಿಶೀಲನೆ ನಡೆಸಬೇಕು ಎಂದು ರೈತರು ಆಗ್ರಹಿಸಿದ್ದಾರೆ.

ರೈತ ಸಂಪರ್ಕ ಕೇಂದ್ರಗಳಲ್ಲಿ ಇನ್ನೂ ಬಿತ್ತನೆ ಬೀಜಗಳು ಲಭ್ಯವಾಗದಿರುವುದರಿಂದ ರೈತರು ಸಂಕಷ್ಟ ಅನುಭವಿಸುತ್ತಿದ್ದಾರೆ. ಸೂರ್ಯಕಾಂತಿ, ಹತ್ತಿ ಹಾಗೂ ತೊಗರಿ ಬೀಜಗಳ ದರ ಏರಿಕೆಯಾಗಿರುವುದನ್ನೂ ಮನವಿಯಲ್ಲಿ ಪ್ರಸ್ತಾಪಿಸಲಾಗಿದ್ದು, ಕೃಷಿ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚಿಸಿ ದರ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಲಾಗಿದೆ.

ಪ್ರಸ್ತುತ ಸಾಲಿನಲ್ಲಿ ರಸಗೊಬ್ಬರದ ಕೊರತೆಯಾಗದಂತೆ ನೋಡಿಕೊಳ್ಳಬೇಕು ಹಾಗೂ ಎಫ್‌ಡಿಐ ಕಡ್ಡಾಯ ಮಾಡಬಾರದು, ರೈತರ ಹೊಲಗಳಿಗೆ ಸಮರ್ಪಕವಾಗಿ 7 ಗಂಟೆಗಳ ವಿದ್ಯುತ್ ಸರಬರಾಜು, ವಿದ್ಯುತ್ ಸಮಸ್ಯೆ ಪರಿಹರಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಬೇಕು.

2025ನೇ ಸಾಲಿನ ಬೆಳೆ ವಿಮೆ ಹಾಗೂ ಬೆಳೆ ಪರಿಹಾರ ವಿತರಣೆಯಲ್ಲಿ ಅನೇಕ ರೈತರಿಗೆ ಸಮರ್ಪಕ ಮಾಹಿತಿ ಸಿಕ್ಕಿಲ್ಲ, ಕೃಷಿ ಮತ್ತು ತೋಟಗಾರಿಕೆ ಇಲಾಖೆಯ ಅಧಿಕಾರಿಗಳು ಗ್ರಾಮ ಮಟ್ಟದಲ್ಲಿ ಮಾಹಿತಿ ನೀಡುವ ಮೂಲಕ ರೈತರಿಗೆ ನ್ಯಾಯ ದೊರಕುವಂತೆ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದ್ದಾರೆ.

ಈ ಸಂದರ್ಭದಲ್ಲಿ ರೈತಸಂಘದ ಜಿಲ್ಲಾಧ್ಯಕ್ಷ ಶಿವಪುತ್ರಪ್ಪ ನಂದಿಹಾಳ, ಈರಣ್ಣ ಗುಡಿಹಾಳ, ಬಸನಗೌಡ, ನಾಗರಾಜ ಗುಡಿಹಾಳ, ಗದ್ದೆಪ್ಪ, ಬಸಪ್ಪ, ಬುಳ್ಳಪ್ಪ, ಹನುಮನೌಡ, ದುರಗಪ್ಪ, ಹನುಮಂತ ಶಿಲಹಳ್ಳಿ, ರಾಘವೇಂದ್ರ, ದುರಗಪ್ಪ ಶಿಲಹಳ್ಳಿ ಸೇರಿದಂತೆ ಇದ್ದರು.

# ಸಿದ್ದರಾಮಯ್ಯ ರಾಜೀನಾಮೆ ಖಂಡಿಸಿ ಪ್ರತಿಭಟನೆ:ಅಭಿಮಾನಿ ಆತ್ಮಹತ್ಯೆ ಯತ್ನ



**ಯಾದಗಿರಿ:ಮೇ.29:** ರಾಜ್ಯ ರಾಜಕೀಯ ಬೆಳವಣಿಗೆಗಳ ನಡುವೆಯೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ರಾಜೀನಾಮೆ ವಿಚಾರ ಖಂಡಿಸಿ ಗುರುವಾರ ಯಾದಗಿರಿ ನಗರದಲ್ಲಿ ನಡೆದ ಪ್ರತಿಭಟನೆ ವೇಳೆ ಭಾವನಾತ್ಮಕ ಹಾಗೂ ಆತಂಕಕಾರಿ ಘಟನೆ ಸಂಭವಿಸಿತು. ಮುಖ್ಯಮಂತ್ರಿ ಪರ ಘೋಷಣೆಗಳನ್ನು ಕೂಗುತ್ತಿದ್ದ ಸಿದ್ದರಾಮಯ್ಯ ಅಭಿಮಾನಿ ಭೀಮು ಪೂಜಾರಿ ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ ಘಟನೆ ಪ್ರತಿಭಟನಾ ಸ್ಥಳದಲ್ಲಿ ಕೆಲಕಾಲ ಉದ್ವಿಗ್ನ ವಾತಾವರಣಕ್ಕೆ ಕಾರಣವಾಯಿತು.

ನಗರದ ನೇತಾಜಿ ಸುಭಾಷ್ ಚಂದ್ರ ಬೋಸ್ ವೃತ್ತದಲ್ಲಿ ಕರ್ನಾಟಕ ಪ್ರದೇಶ ಕುರುಬ ಸಂಘ ಹಾಗೂ ಸಿದ್ದರಾಮಯ್ಯ ಅಭಿಮಾನಿಗಳ ಬಳಗದ ವತಿಯಿಂದ ಭಾರಿ ಪ್ರತಿಭಟನೆ ಆಯೋಜಿಸಲಾಗಿತ್ತು.

ಬೆಳಗ್ಗೆಯಿಂದಲೇ ವಿವಿಧ ಭಾಗಗಳಿಂದ ಆಗಮಿಸಿದ್ದ ನೂರಾರು ಕಾರ್ಯಕರ್ತರು ಮತ್ತು ಅಭಿಮಾನಿಗಳು ಕೈಯಲ್ಲಿ ಬ್ಯಾನರ್, ಫಲಕಗಳನ್ನು ಹಿಡಿದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪರ ಘೋಷಣೆಗಳನ್ನು ಕೂಗಿದರು. "ಸಿದ್ದರಾಮಯ್ಯ ರಾಜೀನಾಮೆ ಬೇಡ", "ಜನನಾಯಕನಿಗೆ ನ್ಯಾಯ ಬೇಕು", "ಹೈಕಮಾಂಡ್ ತೀರ್ಮಾನ ಹಿಂಪಡೆಯಲಿ" ಎಂಬ ಘೋಷಣೆಗಳು ನಗರದೆಲ್ಲೆಡೆ ಮೊಳಗಿದವು.ಪ್ರತಿಭಟನೆಯ ತೀವ್ರತೆ ಹೆಚ್ಚಿದ ಸಂದರ್ಭದಲ್ಲಿ, ಸಿದ್ದರಾಮಯ್ಯ ಅವರ ಕಟ್ಟಾ ಅಭಿಮಾನಿಯಾಗಿರುವ ಭೀಮು ಪೂಜಾರಿ ಏಕಾಏಕಿ ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದು, ಸ್ಥಳದಲ್ಲಿದ್ದ ಕಾರ್ಯಕರ್ತರು ಮತ್ತು ಪೊಲೀಸರು ಅವರನ್ನು ರಕ್ಷಿಸಿದರು.

ಈ ಘಟನೆ ಪ್ರತಿಭಟನೆಯಲ್ಲಿ ಭಾಗವಹಿಸಿದ್ದವರಲ್ಲಿ ಆಕ್ರೋಶ ಮತ್ತು ಭಾವುಕತೆಯನ್ನು ಮತ್ತಷ್ಟು ಹೆಚ್ಚಿಸಿತು. ಹಲವರು ಕಣ್ಣೀರು ಹಾಕುತ್ತಾ ಮುಖ್ಯಮಂತ್ರಿ ವಿರುದ್ಧ ನಡೆಯುತ್ತಿರುವ ರಾಜಕೀಯ ಬೆಳವಣಿಗೆಗಳನ್ನು ಖಂಡಿಸಿದರು. ಬಳಿಕ ಪ್ರತಿಭಟನಾಕಾರರು ಮಾನವ ಸರಪಳಿ ರಚಿಸಿ ರಸ್ತೆ ತಡೆ ನಡೆಸಿ ಕಾಂಗ್ರೆಸ್ ಹೈಕಮಾಂಡ್ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಪರಿಣಾಮವಾಗಿ ಕೆಲಕಾಲ ವಾಹನ ಸಂಚಾರ ಅಸ್ತವ್ಯಸ್ತಗೊಂಡಿತು.

ಪ್ರತಿಭಟನಾ ಸ್ಥಳಕ್ಕೆ ಹೆಚ್ಚುವರಿ ಪೊಲೀಸ್ ಪಡೆ ನಿಯೋಜಿಸಲಾಗಿದ್ದು, ಯಾವುದೇ ಅಹಿತಕರ ಘಟನೆ ನಡೆಯದಂತೆ ಕಟ್ಟೆಚ್ಚರ ವಹಿಸಲಾಯಿತು. ಸಿದ್ದರಾಮಯ್ಯ ಅಭಿಮಾನಿಗಳ ಈ ತೀವ್ರ ಭಾವನಾತ್ಮಕ ಪ್ರತಿಭಟನೆ ಜಿಲ್ಲೆಯಲ್ಲಿ ವ್ಯಾಪಕ ಚರ್ಚೆಗೆ ಗ್ರಾಸವಾಗಿದೆ.

# ಬಕ್ರೀದ್ ಹಬ್ಬ ಆಚರಣೆ



**ನವಲಗುಂದವ,ಮೇ.29:** ಮುಸ್ಲಿಂ ಬಾಂಧವರ ಪವಿತ್ರ ಹಬ್ಬಗಳಲ್ಲಿ ಒಂದಾದ ತ್ಯಾಗ, ಬಲಿದಾನ ಸ್ಮರಿಸುವ ಬಕ್ರೀದ್ ಹಬ್ಬವನ್ನು ಪಟ್ಟಣವೂ ಸೇರಿದಂತೆ ತಾಲ್ಲೂಕಿನಾದ್ಯಂತ ಗುರುವಾರ ಸಂಭ್ರಮದಿಂದ ಆಚರಿಸಿ ಪರಸ್ಪರ ಹಬ್ಬದ ಶುಭಾಶಯ ವಿನಿಮಯ ಮಾಡಿಕೊಂಡರು.

ಸಲೀಮ ಖಾಜಿ ನೇತೃತ್ವದಲ್ಲಿ ಈದ್ ನಮಾಝ್ ನಡೆಯಿತು ಪ್ರಾಥನೆಯಲ್ಲಿ ಪಾಲ್ಗೊಂಡಿದ್ದ ಶಾಸಕ ಎನ್ ಎಚ್ ಕೋನರಡ್ಡಿ ಮಾತನಾಡಿದರು.ಹಬ್ಬದ ಹಿನ್ನೆಲೆಯಲ್ಲಿ ಯಾವುದೇ ಅಹಿತಕರ ಘಟನೆ ಸಂಭವಿಸದಂತೆ ಮುಂಜಾಗ್ರತಾ ಕ್ರಮವಾಗಿ ತಾಲ್ಲೂಕಿನಾದ್ಯಂತ ಬಹುತೇಕ ಮಸೀದಿಗಳಿಗೆ ಬಿಗಿ ಪೊಲೀಸ್ ಬಂದೋಬಸ್ತ್ ಒದಗಿಸಲಾಗಿತ್ತು.

ಬಾಬಾಜಾನ್ ಮುಲ್ಲಾ, ಉಸ್ಮಾನಸಾಬ ಬಬರ್ಚಿ, ಮೌಲಾಸಾಬ ವೈದ್ಯ, ಕರೀಂಸಾಬ ಹರ್ಲಾಪುರ, ಮೋದಿನಸಾಬ ಶಿರೂರ, ಸೈಪುದ್ದಿನ ಅವರಾಧಿ, ಫಕ್ರುದ್ದೀನ ನದಾಫ್, ಸಿರಾಜುದ್ದಿನ ಧಾರವಾಡ,ರಿಯಾಜಅಹ್ಮದ ಪೀರಜಾದೆ, ನಬಿಸಾಬ ನದಾಫ್, ದಾವಲಸಾಬ ಮಸೂತಿ, ಮಾಬುಸಾಬ ಯರಗುಪ್ಪಿ, ಅಬ್ದುಲ್ ನದಾಫ್, ಅಬ್ಬಾಸಾಲಿ ದೇವರಿಡು, ಮಹ್ಮದಅಲಿ ಗದಗ, ಕಾಶೀಮಸಾಬ ಅಲ್ಲಿಬಾಯಿ, ಕತೀಬಸಾಬ ಅಲ್ಲಿಬಾಯಿ, ಅಸ್ಲಾಂ ಬೇಪಾರಿ, ರಿಯಾಜಅಹ್ಮದ ಬೇಪಾರಿ, ಅಲ್ಲಾಸಾಬ ಗೋವನಕೊಪ್ಪ, ದಾದಾಸಾಬ ನಾಶೀಪುಡಿ, ಹಸನಸಾಬ ನಾಶೀಪುಡಿ, ರಾಯೆಸಾಬ ಗುಳೇದ, ಬುಡ್ನಾಸಾಬ ಕಲ್ಲಕುಟ್ರಿ, ಹುಸೇನಸಾಬ ಶಿರಸಂಗಿ, ಅಲ್ಲಾಸಾಬ ಟಾಂಗಾದ, ಬುಡ್ನಾಸಾಬ ನರಗುಂದ, ಬಷಾಸಾಬ ಮಕಾಂದಾರ, ಹುಸೇನಸಾಬ ಶಿಗನಹಳ್ಳಿ ಸೇರಿದಂತೆ ಅಂಜುಮನ್ ಪದಾಧಿಕಾರಿಗಳು ಸದಸ್ಯರು, ಸಮಾಜದ ಬಾಂದವರು ಪ್ರಾಥನೆಯಲ್ಲಿ ಪಾಲ್ಗೊಂಡಿದ್ದರು.

# ಜಿ.ಪಂ ವತಿಯಿಂದ ಗ್ರಂಥಾಲಯ ಮೇಲ್ವಿಚಾರಕರ ಹುದ್ದೆಗೆ ಅರ್ಜಿ ಆಹ್ವಾನ

**ರಾಯಚೂರು ಮೇ.29** : ರಾಯಚೂರು ಜಿಲ್ಲೆಯಲ್ಲಿ ಖಾಲಿ ಇರುವ 13 ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳಿಗೆ ಗ್ರಂಥಾಲಯ ಮೇಲ್ವಿಚಾರಕರ ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಈ ಹುದ್ದೆಗೆ ಸ್ಥಳೀಯ ಗ್ರಾಮ ಪಂಚಾಯತಿಯ ಸಂಬಂಧಿಸಿದ ಮೀಸಲಾತಿ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅವಕಾಶವಿದ್ದು, ಅರ್ಜಿಸಲ್ಲಿಸಲು ಇಚ್ಛಿಸುವ ಅಭ್ಯರ್ಥಿಗಳು ಜಿಲ್ಲಾ ಪಂಚಾಯತಿ ರಾಯಚೂರು ವೆಬ್‌ಸೈಟ್ ವಿಳಾಸ: zpraichur.kar.nic.in ನಲ್ಲಿ ಸಲ್ಲಿಸಬಹುದಾಗಿದೆ.ಸೂಚನೆಗಳನ್ನು ಹಾಗೂ ನೇಮಕಾತಿ ಅಧಿಸೂಚನೆಯನ್ನು ಡೌನ್‌ಲೋಡ್ ಮಾಡಿಕೊಂಡು ಕೂಲಂಕುಷವಾಗಿ ಓದಿ ಅರ್ಥೈಸಿಕೊಂಡು ಅದರಂತೆ ಸೂಕ್ತ ಸಿದ್ಧತೆಯೊಂದಿಗೆ ಜೂನ್ 10ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

**ಶೈಕ್ಷಣಿಕ ಅರ್ಹತೆ:** ದ್ವಿತೀಯ ಪದವಿ ಪೂರ್ವ ಪರೀಕ್ಷೆ (ಪಿಯುಸಿ)ಯಲ್ಲಿ ಉತ್ತೀರ್ಣವಾಗಿರತಕ್ಕದ್ದು, ಮತ್ತು ಸರ್ಟಿಫಿಕೇಶನ್ ಕೋರ್ಸ್ ಇನ್ ಲೈಬ್ರರಿಸೈನ್ಸ್ ನಲ್ಲಿ ಪ್ರಮಾಣ ಪತ್ರ ಪಡೆದಿರತಕ್ಕದ್ದು ಹಾಗೂ ಕನಿಷ್ಟ ಮೂರು ತಿಂಗಳ ಕಂಪ್ಯೂಟರ್ ಕೋರ್ಸ್ನಲ್ಲಿ ಉತ್ತೀರ್ಣವಾಗಿರಬೇಕು.ಆಯ್ಕೆವಿಧಾನ: ನಿಗದಿಪಡಿಸಿದ ವಿದ್ಯಾರ್ಹತೆಯಲ್ಲಿ ಗಳಿಸಿದ ಗರಿಷ್ಠ ಅಂಕಗಳು/ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಲಾಗುತ್ತದೆ ಎಂದು ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಮೇಲ್ವಿಚಾರಕರ ಆಯ್ಕೆ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಆಗಿರುವ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೇಕೆದಾಟು ಯೋಜನೆ: ಮೋದಿ ಮಧ್ಯಪ್ರವೇಶಿಸಲಿ



**ಮೈಸೂರು : ಮೇ.29:–** ಮೇಕೆದಾಟು ಯೋಜನೆಯ ವಿಚಾರವಾಗಿ ಪ್ರಧಾನಿ ಮೋದಿ ಅವರು ಮಧ್ಯಪ್ರವೇಶ ಮಾಡಿ, ರಾಜ್ಯಕ್ಕೆ ನ್ಯಾಯ ಒದಗಿಸಬೇಕು ಎಂದು ಕಾವೇರಿ ಕ್ರಿಯಾ ಸಮಿತಿ ಗೌರವಾಧ್ಯಕ್ಷ, ವಿಧಾನ ಪರಿಷತ್ ಸದಸ್ಯರೂ ಆದ ಸಿ. ಎನ್. ಮಂಜೇಗೌಡ ಅವರು ಆಗ್ರಹಿಸಿದರು.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಇಂದು ಮಾಧ್ಯಮಗೋಷ್ಠಿಯನ್ನುದ್ದೇಶಿ ಮಾತನಾಡಿದ ಅವರು, ತಮಿಳುನಾಡು ಮುಖ್ಯಮಂತ್ರಿ ಜೋಸೆಫ್ ವಿಜಯ್ ಅವರು, ಪ್ರಧಾನಿ ಮೋದಿ ಅವರನ್ನು ಭೇಟಿಯಾಗಿ, ಮೇಕೆದಾಟು ಯೋಜನೆಗೆ ಅನುಮತಿ ನೀಡಬಾರದು ಎಂದು ಮನವಿ ಮಾಡಿದರು.

ಮೇಕೆದಾಟು ಯೋಜನೆಯಿಂದ ಎರಡು ರಾಜ್ಯಗಳಿಗೆ ಅನುಕೂಲವಾಗಲಿದೆ. ಈ ಕುರಿತು ರಾಷ್ಟ್ರಪತಿ, ಪ್ರಧಾನಿ, ಕೇಂದ್ರ ನೀರಾವರಿ ಮಂತ್ರಿಗಳನ್ನು ಕಾವೇರಿ ಕ್ರಿಯಾ ಸಮಿತಿ ನಿಯೋಗದಿಂದ ಭೇಟಿ ಮಾಡಿ, ಮೇಕೆದಾಟು ಯೋಜನೆಯ ನಿರ್ಮಾಣಕ್ಕೆ ಅನುಮತಿ ಕೊಡಿಸುವಂತೆ ಮನವಿ ಮಾಡುತ್ತೇವೆ ಎಂದರು.

ಪ್ರಧಾನ ಮಂತ್ರಿಗಳು ಮೇಕೆದಾಟು ವಿಚಾರವಾಗಿ ಮಧ್ಯಸ್ಥಿಕೆ ವಹಿಸಿ, ಮೇಕೆದಾಟುವಿನಲ್ಲಿ ಅಣೆಕಟ್ಟೆ ಕಟ್ಟಲು ಅವಕಾಶ ಕೊಡಿಸಬೇಕು. ಕಾವೇರಿ ಹುಟ್ಟುವುದು ರಾಜ್ಯದ ಕೊಡಗಿನಲ್ಲಿ, ಇಲ್ಲಿ ಹುಟ್ಟುವ ನೀರು ರಾಜ್ಯಕ್ಕೆ ಸಲ್ಲಬೇಕು. ನೀರು ವ್ಯರ್ಥವಾಗಬಾರದು ಎಂಬ ಉದ್ದೇಶದಿಂದ ಅಣೆಕಟ್ಟು ಕಟ್ಟುವ ಉದ್ದೇಶ ಇದೆ. ಇದರಿಂದ ತಮಿಳುನಾಡಿಗೆ ನೀರಿನ ಸಮಸ್ಯೆ ಎದುರಾಗುವುದಿಲ್ಲ ಎಂದು ಹೇಳಿದರು.

1974ರ ಕಾವೇರಿ ನೀರಿನ ಒಪ್ಪಂದವನ್ನು ಮರು ಪರಿಶೀಲನೆ ಮಾಡಬೇಕು. ರಾಜಕೀಯ ಪಕ್ಷಗಳು ಕಿತ್ತಾಟದಿಂದ ರಾಜ್ಯದಲ್ಲಿ ಕಾವೇರಿ ವಿವಾದ ಇಂದಿಗೂ ಮುಂದುವರೆದಿದೆ. ಆದರೆ, ತಮಿಳುನಾಡಿನಲ್ಲಿ ಜಲ, ನೆಲ, ಭಾಷೆಯ ವಿಷಯ ಬಂದಾಗ ಪಕ್ಷಭೇದ ಮರೆತು, ಎಲ್ಲ ಪಕ್ಷದವರೂ ಒಂದಾಗುತ್ತಾರೆ. ಆದರೆ, ನಮ್ಮಲ್ಲಿ ಒಗ್ಗಟ್ಟಿನ ಕೊರತೆ ಕಾಣುತ್ತಿದೆ. ಇದನ್ನು ಬಿಟ್ಟು ಪಕ್ಷಾತೀತವಾಗಿ ಮೋದಿಯವರನ್ನು ಭೇಟಿ ಮಾಡಿ ಕಾವೇರಿ ನೀರಿನ ಸಮಸ್ಯೆ ಬಗೆಹರಿಸಿಕೊಳ್ಳಬೇಕು ಎಂದು ಒತ್ತಾಯಿಸಿದರು.

ತಮಿಳುನಾಡಿನಲ್ಲಿ ಯಾವುದೇ ಸರ್ಕಾರ ಬಂದರೂ, ಕಾವೇರಿ ನೀರಿನ ವಿಚಾರವಾಗಿ ಧ್ವನಿ ಎತ್ತುತ್ತಿವೆ. ಅದೇ ರೀತಿ ನೂತನ ಸಿಎಂ ಜೋಸೆಫ್ ವಿಜಯ್ ಅವರು ಮೇಕೆದಾಟು ವಿಚಾರವಾಗಿ ಧ್ವನಿ ಎತ್ತಿದ್ದಾರೆ ಎಂದರು.

ಸಮಿತಿ ಅಧ್ಯಕ್ಷ ಎಸ್. ಜಯಪ್ರಕಾಶ್ ಮಾತನಾಡಿ, ತಮಿಳುನಾಡು ನೂತನ ಸಿಎಂ ಜೋಸೆಫ್ ವಿಜಯ್ ಅವರು, ಪ್ರಧಾನಿ ಮೋದಿ ಅವರನ್ನು ಭೇಟಿ ಮಾಡಿ, ಮೇಕೆದಾಟು ಯೋಜನೆ ಕೈ ಬಿಡುವಂತೆ ಮನವಿ ಸಲ್ಲಿಸಿದ್ದಾರೆ. ಇದಕ್ಕೂ ಮೊದಲು ವಿಜಯ್ ಅವರು ಮೇಕೆದಾಟು ಯೋಜನೆಯ ವಿಚಾರವನ್ನು ಸರಿಯಾಗಿ ಅರಿಯಲಿ ಎಂದು ತಿಳಿಸಿದರು.

ಮೇಕೆದಾಟು ಯೋಜನೆ ಆರಂಭಿಸುವಂತೆ ರಾಜ್ಯ ಸರ್ಕಾರವು, ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರಬೇಕು. ಈ ಯೋಜನೆಯಿಂದ ರೈತರಿಗೆ ಹಾಗೂ ಜನರಿಗೆ ಸಾಕಷ್ಟು ಅನುಕೂಲವಾಗಲಿದೆ. ಈ ಯೋಜನೆ ಕೈ ಬಿಟ್ಟರೆ, ಉಗ್ರ ಹೋರಾಟ ಮಾಡುತ್ತೇವೆ ಎಂದು ಎಚ್ಚರಿಕೆ ನೀಡಿದರು.

ಮಾಧ್ಯಮಗೋಷ್ಠಿಯಲ್ಲಿ ನಟಿ ಶುಭರಕ್ಷ, ಕಾವೇರಿ ಕ್ರಿಯಾ ಸಮಿತಿ ಪ್ರಧಾನ ಸಂಚಾಲಕ ಮೂಗೂರು ನಂಜುಂಡಸ್ವಾಮಿ, ಕಾರ್ಯದರ್ಶಿ ಮೆಲ್ಲಹಳ್ಳಿ ಮಹದೇವಸ್ವಾಮಿ, ಎಂ. ಜೆ. ಸುರೇಶಗೌಡ, ರೈತ ಶಿವಕುಮಾರ್, ರವೀಶ್, ಹನುಮಂತೇಗೌಡ, ಸ್ವಾಮಿಗೌಡ ಇದ್ದರು.

# ಹಿಂದುಳಿದ ಕ್ಷೇತ್ರದಲ್ಲಿ ಪಾಂಡುರಂಗ ವಿಠಲನ ಕೃಪೆಯಿಂದ ಅಭಿವೃದ್ಧಿ ನಿಚ್ಚಳ: ರೈತ ಮುಖಂಡ ವೀರಣ್ಣ ಗಂಗಾಣಿ



**ಚಿಂಚೋಳಿ :ಮೇ.29:**ತಾಲೂಕಿನ ಸಾಲೇಬೀರನಳ್ಳಿ ಗ್ರಾಮದ ಹೊರ ವಲಯದ ಪರ್ವತದಲ್ಲಿ ನೆಲೆಸಿರು ಪಾಂಡುರಂಗ ವಿಠಲ ಮಂದಿರದ ಸಭಾಂಗಣದಲ್ಲಿ ಏಕದಶಿ ನಿಮಿತ್ತ ಶ್ರೀ ಮಾರುತಿ ನಾಟ್ಯಸಂಘ ಹಾಗೂ ಪಾಂಡುರಂಗ ವಿಠಲ ಮಂದಿರದ ಭಕ್ತರಿಂದ ಹಮ್ಮಿಕೊಂಡ ವಿವಿಧ ಸಾಧಕರಿಗೆ ಸನ್ಮಾನ ಹಾಗೂ ಅಭಿನಂದನ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ರೈತ ಮುಖಂಡ ವೀರಣ್ಣ ಗಂಗಣ್ಣಿ, ಅವರು

ಮಾತನಾಡಿ ವಿಶಾಲವಾದ ಪರ್ವತದಲ್ಲಿ ನೆಲೆಸಿದ ಪಾಂಡುರಂಗ ವಿಠಲ ಮಂದಿರವು ಕ್ಷೇತ್ರದ ಪುಣ್ಯ ಕ್ಷೇತ್ರವಾಗಿ ಅಭಿವೃದ್ಧಿಯ ಪಥದತ್ತ ಸಾಗಲು ಭಕ್ತರು ತನು, ಮನ, ಧನದಿಂದ ಶ್ರಮಿಸಬೇಕು ಪ್ರತಿ ಏಕದಶಿಯಂದು ಈ ಭಾಗದ ವಿವಿಧ ಸಾಧಕರಿಗೆ ಗುರುತಿ ಸತ್ಕರಿಸುತ್ತಿರುವ ಕಾರ್ಯ ಮಹತ್ತರವಾಗಿದೆ ಎಂದರು ಅತಿ ಹಿಂದುಳಿದ ಕ್ಷೇತ್ರದಲ್ಲಿ ಪಾಂಡುರಂಗ ವಿಠಲ ನೆಲೆಸಿರುವುದು ನಮ್ಮ ಸೌಭಾಗ್ಯ. ಪ್ರತಿಯೊಬ್ಬರು ಭಕ್ತಿ, ಭಾವದಿಂದ ಸೇವೆ ಸಲ್ಲಿಸಿದರೆ ಇಷ್ಟಾರ್ಥ ಸಿದ್ದಿಯಾಗುವುದರಲ್ಲಿ ಸಂದೇಹವಿಲ್ಲ ನಮ್ಮ ಕೈಲಾದಷ್ಟು ಭಕ್ತಿಯಿಂದ ಅಳಿಲು ಸೇವೆ ಸಲ್ಲಿಸುವುದಾಗಿ ಭರವಸೆ ನೀಡಿದರು. ಮತ್ತು ನಮ್ಮ ಚಿಂಚೋಳಿ ಅತೀ ಹಿಂದುಳಿದ ಪ್ರದೇಶವಾಗಿದ್ದು ಈ ಭಾಗದಲ್ಲಿ ದಿವಂಗತ ವೀರೇಂದರ ಪಾಟೀಲರು ಇ ಬಾಗದ ರೈತರಿಗೆ ಅನುಕೂಲವ್ಗಲೆಂದು ಹಲವಾರು ಕೆರೆಕಟೆ ಗಳು ಕಟ್ಟಿದರೆ ಆವಗಳ ಉಪಯೂಯೋಗ ಪಡುಕೊಳ್ಳಬೇಕು. ಮತ್ತು ಈ ಭಾಗದ ರೈತರಿಗೆ ನಾನು ನಿಮ್ಮ ಬೆನ್ನೆಲುಬಾಗೆ ನಿಲ್ಲುತ್ತೇನೆ ಎಂದುರು. ಹಿರಿಯ ಕಲಾವಿದರಾದ ಸಂಗಣ್ಣ ಅಲ್ದಿ ಮಲಕೂಡ ಮಾತನಾಡಿದರು.

ಮತ್ತು ಶಂಕರ ಡಾಕ್ಟರ ಮಾಡಗಿ, ಸನ್ಮಾನಿತರು ಈ ಸಂದರ್ಭದಲ್ಲಿ ಆಯೋಜಕರಾದ ಚಂದ್ರಶೇಖರ್ ಲಕಶಟ್ಟಿ, ಪ್ರಭುಲಿಂಗ ಲೇವಡಿ, ಮಾಣಿಕರಾವ ಗೋಣಿ, ಚಂದ್ರಶೇಖರ್ ಪಾಟೀಲ, ಗೋಪಾಲ್ ರೆಡ್ಡಿ, ಬಾಲರೆಡ್ಡಿ, ರಾಜಶೇಖರ್ ಲಕ್ಕೈಶೆಟ್ಟಿ,ಬಸವರಾಜ್ ಗಾರಂಪಳ್ಳಿ, ಸಂತೋಷ್ ಗಾರಂಪಳ್ಳಿ, ಶಂಕರ್ ಶಿವಪುರಿ, ಜಗನಾಥ ರೆಡ್ಡಿ ಚಟ್ನಳ್ಳಿ, ಚನ್ನಶೆಟ್ಟಿ ಪಾಟೀಲ್, ರಾಜಶೇಖರ್ ಚಿಮ್ಮ,ತುಕಾರಾಂಮ ನೀಲಕಂಠಪ್ಪ, ನೂರಸಿಂಗ ಅಡೆಪ್ಪ ಲೇವಡಿ, ನಿರ್ಮಲ ಲೇವಡಿ , ಸುನಿತಾ ಎಸ್ ರೆಡ್ಡಿ, ಜೈಶ್ರೀ ತುಕಾರಾಂ, ಸುನಿತಾ ಜೆ ಲೇವಡಿ, ದೇವಸ್ಥಾನದ ಪೂಜಾರಿ ಶಾಂತಲಿಂಗಯ್ಯ ಸ್ವಾಮಿ, ಇನ್ನು ಅನೇಕರು ಉಪಸ್ಥಿತರಿದ್ದರು

# ಚಂಡರಕಿ ಈದ್ಗಾ ಮೈದಾನದಲ್ಲಿ ಶ್ರದ್ಧಾಭಕ್ತಿಯ ಸಾಮೂಹಿಕ ಪ್ರಾರ್ಥನೆ

**ಗುರುಮಠಕಲ್ :ಮೇ.29:**ತಾಲೂಕಿನ ಚಂಡರಕಿ ಗ್ರಾಮದ ಸೌಹಾರ್ದತೆ ಮತ್ತು ಸಡಗರದ ಸಂಕೇತವಾದ ಪವಿತ್ರ ಬಕ್ರೀದ್ (ಈದ್-ಉಲ್-ಅಜ್ಹಾ) ಹಬ್ಬವನ್ನು ಅತ್ಯಂತ ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು. ಚಂಡರಕಿ ಗ್ರಾಮದ ಪ್ರಮುಖ ಈದ್ಗಾ ಮೈದಾನದಲ್ಲಿ ಸುಮಾರು 40 ರಿಂದ 50 ಜನ ಮುಸ್ಲಿಂ ಬಾಂಧವರು ಒಟ್ಟಾಗಿ ಸೇರಿ ಸಾಮೂಹಿಕ ನಮಾಜ್ ಹಾಗೂ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ಖ್ಯಾತ ಧಾರ್ಮಿಕ ಅಜೀಂ ಮೊಲಿಸಾಬ್, ಮೊಮ್ಮದ್ ಹನೀಫ್, ಖಾಜಾಮೀಯ, ಮಹಮ್ಮದ್ ಮೊಲ್ಲಾ, ರಶೀದ್ ಬಾಬಾ ಹಾಗೂ ಕಲಿಮ್ ಪಾಟೀಲ್ ಅವರ ದಿವ್ಯ ನೇತೃತ್ವದಲ್ಲಿ ಈದ್ ನಮಾಜ್ ಅತ್ಯಂತ ಶಾಂತಿಯುತವಾಗಿ ನೆರವೇರಿತು.

ತ್ಯಾಗ ಮತ್ತು ಶಾಂತಿಯ ಸಂದೇಶ ನೀಡಿದರು.

ನಮಾಜ್ ಬಳಿಕ ನೆರೆದಿದ್ದ ಸಹಸ್ರಾರು ಧರ್ಮಬಾಂಧವರನ್ನು ಉದ್ದೇಶಿಸಿ ಮಾತನಾಡಿದ ಅಜೀಂ ಮೊಲಿಸಾಬ್ ಅವರು, "ಬಕ್ರೀದ್ ಹಬ್ಬವು ಕೇವಲ ಆಚರಣೆಯಲ್ಲ; ಅದು ಹಜರತ್ ಇಬ್ರಾಹಿಂ ಸಲ್ಲಲ ಹು ಅಲಾಯಿ ಓಸಲ್ಲಾಂ ಅವರ ಅಪ್ರತಿಮ ತ್ಯಾಗ, ಬಲಿದಾನ ಮತ್ತು ಶಾಂತಿಯ ದಿವ್ಯ ಸಂಕೇತವಾಗಿದೆ. ಪ್ರಸ್ತುತ ದಿನಗಳಲ್ಲಿ ನಾವೆಲ್ಲರೂ ಪರಸ್ಪರ ಪ್ರೀತಿ, ವಿಶ್ವಾಸದಿಂದ ಬಾಳಬೇಕಿದೆ," ಎಂದರು. ಇದೇ ವೇಳೆ ಅವರು ದೇಶದಲ್ಲಿ ಸದಾ ಶಾಂತಿ, ಕೋಮು ಸೌಹಾರ್ದತೆ, ಆರ್ಥಿಕ ಅಭಿವೃದ್ಧಿ ಹಾಗೂ ಸರ್ವ ಜನಾಂಗದ ಭಾವೈಕ್ಯತೆ ನೆಲೆಸಲಿ ಎಂದು ಭಗವಂತನಲ್ಲಿ ವಿಶೇಷ ದುವಾ



(ಪ್ರಾರ್ಥನೆ) ಮಾಡಿದರು. ಈ ಪವಿತ್ರ ಪ್ರಾರ್ಥನಾ ಸಂದರ್ಭದಲ್ಲಿ ಪ್ರಮುಖ ಮುಖಂಡರಾದ ಚಾನ್ ಪಾಶ, ಮೊಹಮ್ಮದ್ ಮೊಲ್ಲಾ, ಮಬುಬ್ ಮೊಲ್ಲಾ, ಮೌಲಾನ, ಖಾಜಾ ಉಸೇನ್, ನೀಜಾಂ ಪಾನ್ ವಾಲೆ, ಶಮೀಂ ಪಾಶ ಇತರರು ಉಪಸ್ಥಿತರಿದ್ದರು.

ನಮಾಜ್ ಮುಕ್ತಾಯದ ನಂತರ ಪರಸ್ಪರ ಹಸ್ತಲಾಘವ ಹಾಗೂ ಆಲಿಂಗನ ಮಾಡಿಕೊಳ್ಳುವ ಮೂಲಕ ಬಕ್ರೀದ್ ಹಬ್ಬದ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು. ಈ ವೇಳೆ ಪಿ ಎಸ್ ಐ ಶಾಬದಿ, ಸಿ ಪಿ ಸಿ ರವಿ ರಾಠೋಡ್, ನಾರಾಯಣ, ಗೋವರ್ಧನರೆಡ್ಡಿ ಇದ್ದರು.

# ಬಡವರ ನೋವಿಗೆ, ಸಂಕಟಕ್ಕೆ ದನಿಯಾಗಲು ಶಾಸಕನಾಗಿದ್ದೇನೆ



**ಕೆಂಗೇರಿ ,ಮೇ. 29 :** ಬಡವರು,ದಲಿತರು, ಶೋಷಿತರ ನಿವೇಶನಕ್ಕೆ ಬೇಲಿ ಹಾಕಿ ದುಡ್ಡು ಮಾಡುವ ದಂಧೆ ಕೋರ ಪ್ರವೃತ್ತಿಯ ಸೋಗುಹಾಕಿ ವೇಷ ತೊಟ್ಟಿರುವ ರಾಜಕಾರಣಿ ನಾನಲ್ಲ, ಬಡವರ ನೋವಿಗೆ, ಸಂಕಟಕ್ಕೆ ದನಿಯಾಗಲು ಈ ಭಾಗದ ಶಾಸಕನಾಗಿದ್ದೇನೆ ಎಂದು ಶಾಸಕ ಎಸ್ ಟಿ ಸೋಮಶೇಖರ್ ತಿಳಿಸಿದರು.

ಮಾಗಡಿ ಮುಖ್ಯ ರಸ್ತೆಯ ಕೊಡಿಗೇಹಳ್ಳಿ ರೆವಿನ್ಯೂ ನಿವೇಶನದಾರರ ಹಿತ ರಕ್ಷಣಾ ಸಮಿತಿ ವತಿಯಿಂದ ಬಿಡಿಎ ಸಂಸ್ಥೆಯಿಂದ ನಾಗರೀಕರು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ನ್ಯೂ ಹಾರ್ಡ್ವಿಕ್ ಇಂಡಿಯನ್ ಶಾಲೆಯ ಆವರಣದಲ್ಲಿ ಆಯೋಜಿಸಿದ್ದ ಸಮಾಲೋಚನಾ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ನಾನು ಬದುಕಿರುವವರೆಗೂ ಯಾವುದೇ ಕಾರಣಕ್ಕೂ ಒಂದೇ ಒಂದು ಮನೆ ಬಿಡಿಎ ವತಿಯಿಂದ ಕೆಡವಲು ಬಿಡುವುದಿಲ್ಲ ಎಂದು ನಿವೇಶನದಾರರಿಗೆ ಭರವಸೆ ನೀಡಿದರು. 2008 ರಲ್ಲಿ ಬಿಡಿಎ ವತಿಯಿಂದ ಭೂ ಸ್ವಾಧೀನ ಪ್ರಕ್ರಿಯೆಗೆ ಸೂಚನೆ ನೀಡಿದ್ದಾರೆ ಆಗ ನಾನು ಶಾಸಕನಾಗಿರಲಿಲ್ಲ ಎಂದರು.

ಐದು ವರ್ಷಕ್ಕೊಮ್ಮೆ ಚುನಾವಣಾ ಸಮಯದಲ್ಲಿ ಬಂದು ಕಣ್ಣೀರಿಡುವ ರಾಜಕಾರಣಿ ನಾನಲ್ಲ, ನಿತ್ಯ ಕ್ಷೇತ್ರದ ಜನತೆಯೊಂದಿಗೆ ನಿಕಟ ಸಂಪರ್ಕ ಸಾಧಿಸಿ ಅವರ ಕಷ್ಟ ಕಾರ್ಪಣ್ಯಗಳಿಗೆ ಸ್ಪಂದಿಸುವ ಧ್ಯೇಯದೊಂದಿಗೆ ಕಾರ್ಯನಿರ್ವಹಿಸುತ್ತಿದ್ದೇನೆ ಎಂದರು. ರೈತರ ಪರ,ಬಡವರ ಪರ ಎಂದು ಉದ್ದುದ್ದ ಭಾಷಣ ಬಿಗಿಯುವವರು ಆಗ ಶಾಸಕರಾಗಿದ್ರಲ್ಲ ಏಕೆ ಅವರು ಭೂಸ್ವಾಧೀನ ಪ್ರಕ್ರಿಯೆಯಿಂದ ನಿವೇಶನಗಳನ್ನ ಕೈ ಬಿಡಿಸಲಿಲ್ಲ ಎಂದು ಪ್ರಶ್ನಿಸಿದರು. ಬಡವರು,ಕೂಲಿ ಕಾರ್ಮಿಕರು, ಮಧ್ಯಮ ವರ್ಗದವರು ಒಂದೊಂದು ರೂಪಾಯನ್ನ ಜೋಡಿಸಿ ನಿವೇಶನ ಖರೀದಿಸಿದ್ದೀರಿ ನಿಮಗೆ ಯಾವುದೇ ರೀತಿಯ ತೊಂದರೆಯಾಗದಂತೆ ಕಾನೂನು ಅಡಿಯಲ್ಲಿ ನಿವೇಶನದಾರರ ನಿಯೋಗದೊಂದಿಗೆ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಸಮಸ್ಯೆಗೆ ಶಾಶ್ವತ ಪರಿಹಾರ ಒದಗಿಸಲು ಪ್ರಾಮಾಣಿಕ ಪ್ರಯತ್ನ ನಡೆಸುತ್ತೇನೆ ಎಂದರು. ನಾಲ್ಕು ಬಾರಿ ಶಾಸಕರಾಗಿ, ಮಂತ್ರಿಯಾಗಿ ಸೇವೆ ಮಾಡಲು ಆಶೀರ್ವಾದ ಮಾಡಿದ್ದೀರಿ ನಿಮ್ಮ ಸಮಸ್ಯೆಗೆ ಪರಿಹಾರ ಒದಗಿಸದಿದ್ದರೆ ನಾನು ಶಾಸಕನಾಗಿರಲು ಅರ್ಹನಲ್ಲ ಎಂದರು.

ಬಿಡಿಎ ಕಾರ್ಯಪಾಲಕ ಅಭಿಯಂತರ ಅಶೋಕ್, ಕೆಂಪೇಗೌಡ ಬಡಾವಣೆಯ ಭೂಸ್ವಾಧೀನಾಧಿಕಾರಿ ಉಮೇಶ್, ಸಹಾಯಕ ಅಭಿಯಂತರ ಅರುಣ್, ಕೊಡಿಗೇಹಳ್ಳಿ ರೆವಿನ್ಯೂ ನಿವೇಶನದಾರರ ಹಿತ ರಕ್ಷಣಾ ಸಮಿತಿಯ ಗೌರವಾಧ್ಯಕ್ಷ ವಿ. ಕೃಷ್ಣಮೂರ್ತಿ, ಅಧ್ಯಕ್ಷೆ ಸಾವಿತ್ರಿ ಗೌಡ,ಕೊಡಿಗೇಹಳ್ಳಿ ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷರಾದ ಎನ್. ನಂಜುಂಡೇಶ್, ದೇವರಾಜ್ ಹಿರಿಯ ಮುಖಂಡರಾದ ನಾಗರಾಜ್, ರಂಗನಾಥ್, ಸಮಿತಿಯ ಪದಾಧಿಕಾರಿಗಳು ಮತ್ತಿತರರು ಉಪಸ್ಥಿತರಿದ್ದರು.

# ಸಂಸ್ಥೆಯ ಚಾಲಕರು ಸೇವಾ ಯೋಧರು:ಅರುಣಕುಮಾರ ಪಾಟೀಲ



**ಕಲಬುರಗಿ,ಮೇ.29:** ಸಾರಿಗೆ ಸಂಸ್ಥೆಯ ಚಾಲಕರು ಕೇವಲ ವಾಹನ ಚಾಲಕರು ಮಾತ್ರವಲ್ಲ, ಪ್ರತಿದಿನ ಸಾವಿರಾರು ಪ್ರಯಾಣಿಕರ ಜೀವವನ್ನು ಸುರಕ್ಷಿತವಾಗಿ ತಲುಪಿಸುವ ಹೊಣೆಗಾರಿಕೆಯನ್ನು ಹೊತ್ತಿರುವ ಸೇವಾ ಯೋಧರಾಗಿದ್ದಾರೆ ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಅಧ್ಯಕ್ಷ ಅರುಣಕುಮಾರ ಪಾಟೀಲ ಹೇಳಿದರು.

ಇತ್ತೀಚೆಗೆ ವಿಜಯನಗರ ಜಿಲ್ಲೆಯ ಕೂಡ್ಲಗಿ ಘಟಕದಲ್ಲಿ ಆಯೋಜಿಸಿದ 2025-26ನೇ ಸಾಲಿನ ಇಂಧನ ಉಳಿತಾಯ ದ್ವಿಮಾಸಿಕ ಕಾರ್ಯಕ್ರಮದಡಿ ಕೆ.ಎಂ.ಪಿ.ಎಲ್ ವೃದ್ಧಿಯ ಮೂಲಕ ಅತ್ಯುತ್ತಮ ಇಂಧನ ಉಳಿತಾಯ ಸಾಧಿಸಿ ನಿಗಮದ ಆರ್ಥಿಕ ಸದೃಢತೆಗೆ ಕೊಡುಗೆ ನೀಡಿದ ನಿಗಮದ ವಿಭಾಗೀಯ ನಿಯಂತ್ರಕರು, ವಿಭಾಗೀಯ ಯಾಂತ್ರಿಕ ಅಭಿಯಂತರರು, ಘಟಕ ವ್ಯವಸ್ಥಾಪಕರು, ಚಾಲಕರು ಹಾಗೂ ಯಾಂತ್ರಿಕ ಸಿಬ್ಬಂದಿಗಳನ್ನು ಸನ್ಮಾನಿಸಿ ಪ್ರಶಂಸನಾ ಪತ್ರ ಹಾಗೂ ನಗದು ಬಹುಮಾನ ವಿತರಿಸುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಖಾಸಗಿ ವಾಹನಗಳ ಚಾಲಕರಿಗಿಂತ ನಮ್ಮ ನಿಗಮದ ಚಾಲಕರು ಸೇವಾ ಮನೋಭಾವ, ಶಿಸ್ತು, ಪ್ರಾಮಾಣಿಕತೆ, ನಿಷ್ಠೆ ಹಾಗೂ ಪ್ರಯಾಣಿಕರ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡುತ್ತಾ ವಿಭಿನ್ನ ಸ್ಥಾನ ಹೊಂದಿದ್ದಾರೆ. ನಮ್ಮ ಚಾಲಕರ ಕಾರ್ಯಕ್ಷಮತೆ ನಿಜವಾಗಿಯೂ ಹೆಮ್ಮೆಯ ಸಂಗತಿಯಾಗಿದೆ. ಜೊತೆಗೆ ಯಾಂತ್ರಿಕ ನಿರ್ವಹಣೆ ಮಾಡುವ ಎಲ್ಲಾ ಯಾಂತ್ರಿಕ ಸಿಬ್ಬಂದಿಯ ಶ್ರದ್ಧೆ, ನಿಷ್ಠೆ ಹಾಗೂ ಸೇವಾ ಮನೋಭಾವದಿಂದಲೇ ನಿಗಮ ಪ್ರಯಾಣಿಕರಿಗೆ ಗುಣಮಟ್ಟದ ಸೇವೆ ನೀಡುತ್ತಿದೆ ಎಂದು ಸಿಬ್ಬಂದಿಯ ಕಾರ್ಯವೈಖರಿಯನ್ನು ಶ್ಲಾಘಿಸಿದರು.

ಇಂದು ಕರ್ನಾಟಕದ ಸಾರಿಗೆ ವ್ಯವಸ್ಥೆ ದೇಶದಲ್ಲಿಯೇ ಮಾದರಿಯಾಗಿರುವುದಕ್ಕೆ ನೌಕರರ ಅವಿರತ ಶ್ರಮ, ಸೇವಾ ಮನೋಭಾವನೆಯೆ ಕಟರಣವಾಗಿದೆ. ಹಲವು ರಾಜ್ಯಗಳ ಸಾರಿಗೆ ಸೇವೆಗೆ ಹೋಲಿಸಿದರೆ ಕರ್ನಾಟಕದ ಸಾರಿಗೆ ಸೇವೆ ಪ್ರಯಾಣಿಕರ ವಿಶ್ವಾಸ ಗಳಿಸಿರುವುದು ಹೆಮ್ಮೆಯ ವಿಚಾರ. ಅತ್ಯುತ್ತಮ ಸೇವೆಗಳಿಗಾಗಿ ನಮ್ಮ ನಿಗಮ ರಾಷ್ಟ್ರ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಅನೇಕ ಪ್ರಶಸ್ತಿಗಳನ್ನು ಪಡೆದಿದೆ ಎಂದರು.

ಇದೇ ಸಂದರ್ಭದಲ್ಲಿ ಕೆ.ಎಂ.ಪಿ.ಎಲ್ ಉತ್ತಮ ಸಾಧನೆಗೈದ 43 ಜನ ಚಾಲಕರು, 4 ಜನ ವಿಭಾಗೀಯ ನಿಯಂತ್ರಣಾಧಿಕಾರಿಗಳು, 4 ಜನ ವಿಭಾಗೀಯ ಯಾಂತ್ರಿಕ ಅಭಿಯಂತರರು ಹಾಗೂ 12 ಜನ ಘಟಕ ವ್ಯವಸ್ಥಾಪಕರು ಹಾಗೂ 10 ಜನ ಯಾಂತ್ರಿಕ ಇಲಾಖೆಯ ಸಿಬ್ಬಂದಿಗಳು ಸೇರಿದಂತೆ ಒಟ್ಟು 73 ಜನ ಸಾಧಕರಿಗೆ ನಗದು ಬಹುಮಾನ, ಪ್ರಶಂಸನಾ ಪತ್ರ ನೀಡಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಡಾ. ಸುಶೀಲಾ ಬಿ., ಮುಖ್ಯ ಯಾಂತ್ರಿಕ ಅಭಿಯಂತರರು, ವಿಭಾಗೀಯ ನಿಯಂತ್ರಕರು ಸೇರಿದಂತೆ ಸಾರಿಗೆ ಸಂಸ್ಥೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಹಾಜರಿದ್ದರು.

# ಬಕ್ರೀದ ತ್ಯಾಗದ ಸಂಕೇತ:ಮೌಲಾನಾ ಫೈಸಲ ಸಕಾಪ ಖಾದ್ರಿಸಾದತ



**ವಿಜಯಪುರ:ಮೇ.29:** ಬಕ್ರೀದ ಹಬ್ಬ ತ್ಯಾಗ ಮತ್ತು ಬಲಿದಾನದ ಸಂಕೇತವಾಗಿದೆ. ಇಬ್ರಾಹಿಂ ಅಲೆ ಸಲಾಮರವರ ಪ್ರೀತಿಯ ಮಗನಾದ ಇಸ್ಮಾಯಿಲ್ ಇವರನ್ನು ದೇವರ ವಾಣಿಯಂತೆ ಬಲಿದಾನ ತೆಗೆದುಕೊಳ್ಳುವಾಗ ನಡೆದ ಘಟನೆ ಬಕ್ರೀದ ಹಬ್ಬದ ಪ್ರತೀಕವಾಗಿದೆ.

ಇಂದು ವಿಜಯಪುರ ನಗರದ ಪವಿತ್ರ ಆಸಾರ ಮಹಲ ಶರೀಪದಲ್ಲಿ ನಡೆದ ಬಕ್ರೀದ ಹಬ್ಬದ ಪ್ರಾರ್ಥನೆಯಲ್ಲಿ ಆಶೀರ್ವಚನ ನೀಡುತ್ತ ಒಡಹುಟ್ಟಿದ ಮಗ ಇಸ್ಮಾಯಿಲನನ್ನು ತಂದೆಯಾದ ಇಬ್ರಾಹಿಂ ಅಲೆ ಸಲಾಮರವರು ದೇವರಿಗೆ ಸಮರ್ಪಣೆ ಮಾಡಲು ಮಗನ ಕುತ್ತಿಗೆಯ ಮೇಲೆ ಅಸ್ತ್ರವನ್ನಿಟ್ಟು ಬಲಿದಾನ ಮಾಡುವಾಗ ದೇವರ ಕೃಪೆಯಂತೆ ಅಸ್ತ್ರ ನಡೆಯದೆ ಒಂದು ಪವಾಡವಾಗಿ ಪ್ರಾಣಿಯ ಬಲಿದಾನವಾಗಿದ್ದು ಇತಿಹಾಸದಲ್ಲಿ ಬರೆಯಲ್ಪಡುತ್ತದೆ.

ದೇವರ ಮಕ್ಕಳಾದ ನಾವುಗಳು ದೇವಭಯ ಹೊಂದಿರಬೇಕು. ನಾವೆಲ್ಲರೂ ದೇವರ ಕೃಪೆಯಿಂದ ಬದುಕಿ ಬಾಳುತ್ತಿದ್ದೇವೆ. ನಮ್ಮೆಲ್ಲರ ಕರ್ಮಗಳನ್ನು ದೇವನೊಬ್ಬ ಗಮನಿಸುತ್ತಿದ್ದಾನೆ. ದೇವರ ಮನೆಯಿದು. ಬಾಡಿಗೆದಾರರು ನಾವುಗಳೆಲ್ಲ ಎಂಬ ಮಾತಿನಂತೆ ವಸುದೇವ ಕುಟುಂಬಕಂ ಎಂಬ ವಿಚಾರದಲ್ಲಿ ನಂಬಿಕೆಯಿಟ್ಟು ಬದುಕಬೇಕಾಗಿದೆ.

ಎಲ್ಲ ಧರ್ಮಗಳು ಮಾನವ ಕುಲಕೋಟಿಗೆ ಸನ್ಮಾರ್ಗ ತೋರಿಸಿವೆ. ಅಸೂಯೆ ಮತ್ತು ದ್ವೇಷದಿಂದ ದೂರವಿದ್ದು ಪ್ರೀತಿ, ಮಮತೆ, ಸೌಹಾರ್ದತೆ ಸ್ಥಾಪನೆ ಮಾಡಬೇಕು. ಬಹುಭಾಷಿಕರ ದೇಶ ಭಾರತ ಬಹು ಧರ್ಮಿಯರ ದೇಶ ಭಾರತ, ಬಹು ಸಂಸ್ಕೃತಿಯ ದೇಶ ಭಾರತ ಎಲ್ಲ ಸಂಸ್ಕೃತಿ ಭಾಷೆ, ಧರ್ಮ ಗೌರವಿಸಬೇಕು. ಯುವಕರು ಜ್ಞಾನ ಸಂಪಾದನೆಗೆ ಪ್ರಾಧ್ಯಾನತೆ ನೀಡಬೇಕು. ಕುಟುಂಬದ ಪಾಲಕರ ಪೋಷಣೆ ಸಾಗಬೇಕು. ಆರ್ಥಿಕ ಸಬಲೀಕರಣದಲ್ಲಿ ನಂಬಿಕೆ ಇಡಬೇಕು ಎಂದು ತಮ್ಮ ಆಶೀರ್ವಚನದಲ್ಲಿ ಹೇಳಿದರು.

ಈ ಸಂದರ್ಭದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಹಾಸಿಂಪೀರ ವಾಲಿಕಾರ, ಸೈಯ್ಯದ ಅಮೀದ ತಕಾಪಸಾದಾತ, ಸೈಯ್ಯದ ಮುಸ್ತಾಫಾಖಾದ್ರಿ ಸಾದಾತ, ಜಮೀರಅಹ್ಮದ ಬಾಗಲಕೋಟ, ಪಾಪಾ ಪೀರಜಾದೆ, ಹಾಸಿಂಪೀರ ಇನಾಮದಾರ, ಸೈಯ್ಯದ ಅತಿಕಪೀರಾಸಾದಾತ, ಜಾವಿದ ಕಿಲ್ಲೇದಾರ ಮುಂತಾದವರು ಉಪಸ್ಥಿತರಿದ್ದರು.

# ಡಾ.ಹಳಕಟ್ಟಿ ಇಂಜನೀಯರಿಂಗ್ ಕಾಲೇಜಗೆ 28 ನೇ ರ್‍ಯಾಂಕ್



**ವಿಜಯಪುರ:** ನಗರದ ಬಿ.ಎಲ್.ಡಿ.ಇ ಸಂಸ್ಥೆಯ ವಚನಪಿತಾಮಹ ಡಾ. ಫ. ಗು. ಹಳಕಟ್ಟಿ ಎಂಜಿನಿಯರಿಂಗ್ ಕಾಲೇಜಿಗೆ ದೇಶದ ಅತ್ಯುನ್ನತ 175 ಕಾಲೇಜುಗಳಲ್ಲಿ 28ನೇ ರ್‍ಯಾಂಕ್ ಲಭಿಸಿದೆ.

ನ್ಯಾಷನಲ್ ಟೈಮ್ಸ್ ಎಂಜಿನಿಯರಿಂಗ್ ರ್‍ಯಾಂಕಿಂಗ್ ನಡೆಸಿದ ಸಮೀಕ್ಷೆಯಲ್ಲಿ ಈ ಸ್ಥಾನ ಸಿಕ್ಕಿದೆ. ಈ ಸಂಸ್ಥೆ ದೇಶದ ನಾನಾ ಎಂಜಿನಿಯರಿಂಗ್ ಕಾಲೇಜುಗಳ ಸಮೀಕ್ಷೆ ನಡೆಸಿದ್ದು, ಬಿ.ಎಲ್.ಡಿ.ಇ ಎಂಜಿನಿಯರಿಂಗ್ ಕಾಲೇಜು ನಾನಾ ವಿಭಾಗಗಳಲ್ಲಿ ಅತ್ಯುತ್ತಮ ಸಾಧನೆ ಮಾಡುವ ಮೂಲಕ ಗಮನ ಸೆಳೆದಿದೆ.

ಕಾಲೇಜಿನ ವಿದ್ಯಾರ್ಥಿಗಳಿಗೆ ಉದ್ಯೋಗ ವ್ಯವಸ್ಥೆ ಮಾಡುವಲ್ಲಿ ದೇಶದ ಉನ್ನತ 70 ಖಾಸಗಿ ಕಾಲೇಜುಗಳ ಪೈಕಿ ಬಿ.ಎಲ್.ಡಿ.ಇ ಎಂಜಿನಿಯರಿಂಗ್ ಕಾಲೇಜಿಗೆ 43ನೇ ರ್‍ಯಾಂಕ್ ಬಂದಿದೆ.

ಅದೇ ರೀತಿ ದೇಶದ 125 ಖಾಸಗಿ ಎಂಜಿನಿಯರಿಂಗ್ ಕಾಲೇಜುಗಳಲ್ಲಿ 27ನೇ ರ್‍ಯಾಂಕ್ ಬಂದಿದ್ದರೆ, ದಕ್ಷಿಣ ಭಾರತದ ಅತ್ಯುತ್ತಮ 25 ಎಂಜಿನಿಯರಿಂಗ್ ಕಾಲೇಜುಗಳಲ್ಲಿ 15ನೇ ಸ್ಥಾನ ಲಭಿಸಿದೆ.

ಕಾಲೇಜಿನ ಈ ಸಾಧನೆಗೆ ಬಿ.ಎಲ್.ಡಿ.ಇ ಸಂಸ್ಥೆಯ ಅಧ್ಯಕ್ಷ ಮತ್ತು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ, ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಮತ್ತು ವಿಧಾನ ಪರಿಷತ ಶಾಸಕ ಸುನೀಲಗೌಡ ಪಾಟೀಲ ಸಂತಸ ವ್ಯಕ್ತಪಡಿಸಿದ್ದು, ಕಾಲೇಜಿನ ಎಲ್ಲ ಆಡಳಿತ ಮಂಡಳಿ, ಬೋಧಕ ಮತ್ತು ಬೋಧಕರ ಹೊರತಾದ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳಿಗೆ ಅಭಿನಂದನೆ ಸಲ್ಲಿಸಿದ್ದಾರೆ ಎಂದು ಕಾಲೇಜಿನ ಪ್ರಾಚಾರ್ಯ ಡಾ. ಪಿ. ಮಂಜುನಾಥ ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೇತುವೆ ಕುಸಿದು 6 ಮಂದಿ ಕಾರ್ಮಿಕರ ಸಾವು


**ಹಮೀರ್‌ಪುರ,ಮೇ.29–**ಉತ್ತರ ಪ್ರದೇಶದ ಹಮೀರ್‌ಪುರ ಜಿಲ್ಲೆಯಲ್ಲಿ ಭೀಕರ ಅಪಘಾತ ಸಂಭವಿಸಿದೆ . ಭಾರೀ ಬಿರುಗಾಳಿ ಮತ್ತು ಮಳೆಯ ನಡುವೆ ಬೆಟ್ವಾ ನದಿಗೆ ನಿರ್ಮಾಣ ಹಂತದಲ್ಲಿದ್ದ ಸೇತುವೆ ಇದ್ದಕ್ಕಿದ್ದಂತೆ ಕುಸಿದು ಬಿದ್ದಿದೆ. ಈ ಅವಘಡದಲ್ಲಿ ಆರು ಕಾರ್ಮಿಕರು ದುರಂತವಾಗಿ ಸಾವನ್ನಪ್ಪಿದ್ದಾರೆ .

ಅವಶೇಷಗಳ ಅಡಿಯಲ್ಲಿ ಹೂತುಹೋಗಿ ಸಾವನ್ನಪ್ಪಿದ್ದಾರೆ. ಇನ್ನೂ ಹಲವರು ಸಿಲುಕಿಕೊಂಡಿರುವ ಶಂಕೆ ವ್ಯಕ್ತವಾಗಿದೆ.

ಅಪಘಾತದ ಬಗ್ಗೆ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ತಕ್ಷಣವೇ ಮಾಹಿತಿ ಪಡೆದು, ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆಗಳನ್ನು ಕೈಗೊಳ್ಳುವಂತೆ ಹಿರಿಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ಶುಕ್ರವಾರ ಬೆಳಗಿನ ಜಾವ 3 ಗಂಟೆ ಸುಮಾರಿಗೆ ಅಪಘಾತ ಸಂಭವಿಸಿದೆ. ಲಾಲ್‌ಪುರ ಪೊಲೀಸ್ ಠಾಣೆ ಪ್ರದೇಶದ ಮೊರಕಂದರ್ ಮತ್ತು ಕುರಾರ ಗ್ರಾಮಗಳನ್ನು ಸಂಪರ್ಕಿಸಲು ಸೇತುವೆಯನ್ನು ನಿರ್ಮಿಸಲಾಗುತ್ತಿತ್ತು. ಅಪಘಾತದ ಸಮಯದಲ್ಲಿ ಹಲವಾರು ಕಾರ್ಮಿಕರು ಸೇತುವೆಯ ಕೆಳಗೆ ಮಲಗಿದ್ದರು ಎಂದು ವರದಿಯಾಗಿದೆ. ಅವರು ಬೆಳಿಗ್ಗೆ ಎದ್ದು ನಿರ್ಮಾಣ ಕಾರ್ಯವನ್ನು ಪುನರಾರಂಭಿಸಬೇಕಾಗಿತ್ತು, ಆದರೆ ಅದು ಸಂಭವಿಸುವ ಮೊದಲು, ಸೇತುವೆಯ ದೊಡ್ಡ ಭಾಗ ಕುಸಿದು ಬಿದ್ದಿದೆ.

ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆಯನ್ನು ಚುರುಕುಗೊಳಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ ಮುಖ್ಯಮಂತ್ರಿ, ಮೃತರ ಕುಟುಂಬಗಳೊಂದಿಗೆ ನೇರ



ಸಂಪರ್ಕ ಸಾಧಿಸಿ ಅವರಿಗೆ ಸಾಧ್ಯವಿರುವ ಎಲ್ಲ ಸಹಾಯವನ್ನು ಒದಗಿಸಬೇಕು ಎಂದು ಸೂಚಿಸಿದ್ದಾರೆ

ಅಪಘಾತದ ಬಗ್ಗೆ ಮಾಹಿತಿ ಪಡೆದ ನಂತರ,ಪೊಲೀಸರು, ಆಡಳಿತ ಅಧಿಕಾರಿಗಳು ಮತ್ತು ಪರಿಹಾರ ಮತ್ತು ರಕ್ಷಣಾ ತಂಡಗಳು ಸ್ಥಳಕ್ಕೆ ಆಗಮಿಸಿ ಸ್ಥಳೀಯ ನಿವಾಸಿಗಳ ಸಹಾಯದಿಂದ ರಕ್ಷಣಾ ಕಾರ್ಯಾಚರಣೆ ಆರಂಭಿಸಿದ್ದಾರೆ. ಅವಶೇಷಗಳಡಿ ಸಿಲುಕಿರುವವರ ರಕ್ಷಣೆ ರಕ್ಷಣಾ ಮುಂದುವರೆದಿದೆ. ಇನ್ನೂ ಕೆಲವು ಜನರು ಅವಶೇಷಗಳ ಅಡಿಯಲ್ಲಿ ಸಿಲುಕಿರುವ ಸಾಧ್ಯತೆ ಇದೆ ಆದ್ದರಿಂದ, ಸಾವಿನ ಸಂಖ್ಯೆ ಹೆಚ್ಚಾಗಬಹುದು ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಅಪಘಾತದ ನಂತರ, ನಿರ್ಮಾಣ ಸ್ಥಳದಲ್ಲಿ ಸುರಕ್ಷತಾ ವ್ಯವಸ್ಥೆಗಳ ಬಗ್ಗೆ ಪ್ರಶ್ನೆಗಳು ಎದ್ದಿವೆ. ಕಾರ್ಮಿಕರಿಗೆ ಸಾಕಷ್ಟು ಸುರಕ್ಷತಾ ಕ್ರಮಗಳು ಜಾರಿಯಲ್ಲಿಲ್ಲ ಎಂಬ ಆರೋಪಗಳು ಕೇಳಿಬರುತ್ತಿವೆ. ಪ್ರತಿಕೂಲ ಹವಾಮಾನದ ಹೊರತಾಗಿಯೂ, ಕಾರ್ಮಿಕರನ್ನು ಅಲ್ಲಿಯೇ ಇರಲು ಅನುಮತಿಸಲಾಗಿತ್ತು, ಇದು ಅಪಘಾತಕ್ಕೆ ಕಾರಣವಾಗಿದೆ ಎನ್ನಲಾಗಿದೆ.

# ಪ್ರಿಯಾಂಕ್‌ಗೆ ಡಿಸಿಎಂ, ಡಾ.ಅಜಯಸಿಂಗ್‌ಗೆ ಸಚಿವ ಸ್ಥಾನ ನೀಡಲು ಮನವಿ



**ಕಲಬುರಗಿ, ಮೇ.29–** ರಾಜ್ಯ ನೂತನ ಸಚಿವ ಸಂಪುಟ ರಚನೆಯಲ್ಲಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರಿಗೆ ಡಿಸಿಎಂ ಹುದ್ದೆಯನ್ನು ಹಾಗೂ ಜೇವರ್ಗಿ ಶಾಸಕರಾದ ಡಾ.ಅಜಯಸಿಂಗ್ ಅವರಿಗೆ ಸಂಪುಟ ದರ್ಜೆಯ ಸಚಿವ ಸ್ಥಾನ ನೀಡುವಂತೆ ಕರ್ನಾಟಕ ರಾಜ್ಯ ಬೀದಿ ವ್ಯಾಪಾರಿಗಳ ಸಂಘದ ಪ್ರಮುಖರ ನಿಯೋಗ ರಾಜ್ಯ ಕಾಂಗ್ರೆಸ್ ಹೈಕಮಾಂಡ್ ಗೆ ಮನವಿ ಮಾಡಿದೆ.

ಕಲ್ಯಾಣ ಕರ್ನಾಟಕದ ಜನಪ್ರೀಂಯು ನಾಯಕರಾಗಿರುವ ಪ್ರಿಯಾಂಕ್ ಖರ್ಗೆ ಮತ್ತು ಡಾ.ಅಜಯ ಧರಂಸಿಂಗ್ ಅವರು, ಹ್ಯಾಟ್ರಿಕ್ ಶಾಸಕಾರಗಿ ಈ ಭಾಗದಲ್ಲಿ ಅಪಾರ ಸಂಖ್ಯೆಯಲ್ಲಿ ಬೆಂಬಲಿಗರನ್ನು ಹೊಂದಿದ್ದಾರೆ. ಪ್ರಬುದ್ಧ ಯುವ ರಾಜಕಾರಣಿ ಆಗಿರುವ ಈ ಇಬ್ಬರು ನಾಯಕರಿಗೆ ರಾಜ್ಯದ ನೂತನ ಸಚಿವ ಸಂಪುಟ ರಚನೆಯಲ್ಲಿ ಪ್ರಿಯಾಂಕ್ ಖರ್ಗೆ ಅವರಿಗೆ ಉಪ ಮುಖ್ಯಮಂತ್ರಿ ಹಾಗೂ ಡಾ.ಅಜಯಸಿಂಗ್ ಅವರಿಗೆ ಸಂಪುಟ ದರ್ಜೆಯ ಸಚಿವ ಸ್ಥಾನ ನೀಡುವಂತೆ ಸಂಘದ ಸಂಸ್ಥಾಪಕ ಅಧ್ಯಕ್ಷ ಜಗನ್ನಾಥ ಎಸ್.ಸೂರ್ಯವಂಶಿ, ಹಿರಿಯ ನ್ಯಾಯವಾದಿ ಗುರುರಾಜ ತಿಳಗೊಳ, ಜೇವರ್ಗಿ ಅಕ್ರಮ ಸಕ್ರಮ ಭೂ ಮಂಜೂರಾತಿ ಸಮಿತಿ ಸದಸ್ಯರಾದ ಮಹಾದೇವ ನಿಲಕೂಡ, ಚಂದ್ರಹಾಸ ಚಿದ್ರಿ, ಅಮೃತ ಸಿ.ಪಾಟೀಲ್ ಸಿರನೂರ, ರವಿ ಒಂಟಿ, ಖಾಜಾ ಮೈನೂದ್ದೀನ, ವೆಂಕಟೇಶ ಕಾಂಬಳೆ, ಸುಭಾಸ ಡಬ್ರಿ ಅವರು, ಪಕ್ಷದ ವರಿಷ್ಟರನ್ನು ಒತ್ತಾಯಿಸಿದ್ದಾರೆ.

ಹಿಂದುಳಿದ ಕಲ್ಯಾಣ ಕರ್ನಾಟಕ ಭಾಗದ ಈ ಇಬ್ಬರು ಪ್ರಭಾವಿ ಯುವ ನಾಯಕುರಿಗೆ ಸೂಕ್ತ ಸ್ಥಾನ ಮಾನ ನೀಡುವ ಮೂಲಕ ಈ ಭಾಗದ ಸಮಗ್ರ ಅಭಿವೃದ್ಧಿಗೆ ಸಹಕಾರ ನೀಡಿದಂತಾಗುತ್ತದೆ ಅಲ್ಲದೇ ಪ್ರಾದೇಶಿಕ ಅಸಮಾನತೆಯನ್ನು ಹೋಗಲಾಡಿಸಲು ಸಮಾಜಿಕ ನ್ಯಾಯ ಕಲ್ಪಿಸಲು ಪ್ರಮಾಣಿಕ ಪ್ರಯತ್ನ ಪಕ್ಷದ ವರಿಷ್ಠರು ಮಾಡಿದಂತಾಗುತ್ತದೆ ಎಂದು ತಮ್ಮ ಹೇಳಿಕೆಯಲ್ಲಿ ಅವರು ತಿಳಿಸಿದ್ದಾರೆ.

# ದೋರನಹಳ್ಳಿ ಆಸ್ಪತ್ರೆ ಕಟ್ಟಡ ಕಾಮಗಾರಿಯಲ್ಲಿ ಗುಣಮಟ್ಟ ಪ್ರಶ್ನೆ; ಸತ್ಯ ಮುಚ್ಚಿಹಾಕಲು ಯತ್ನವೇ?



**ಯಾದಗಿರಿ:ಮೇ.29:** ಜಿಲ್ಲೆಯ ಶಹಪುರ ತಾಲ್ಲೂಕಿನ ದೋರನಹಳ್ಳಿ ಪಟ್ಟಣದಲ್ಲಿ ಕೆ.ಕೆ.ಆರ್.ಡಿ.ಬಿ ಯೋಜನೆಯಡಿ ನಿರ್ಮಾಣವಾಗುತ್ತಿರುವ ಸಮುದಾಯ ಆರೋಗ್ಯ ಕೇಂದ್ರ ಕಟ್ಟಡದ ಕಾಮಗಾರಿ ಕಳಪೆ ಗುಣಮಟ್ಟದಲ್ಲಿ ನಡೆಯುತ್ತಿದೆ ಎಂಬ ಆರೋಪಗಳು ಇದೀಗ ಮತ್ತಷ್ಟು ಗಂಭೀರ ಸ್ವರೂಪ ಪಡೆದುಕೊಂಡಿವೆ. ಸಾರ್ವಜನಿಕರ ಆರೋಗ್ಯ ಸೇವೆಗಾಗಿ ಕೋಟ್ಯಂತರ ರೂಪಾಯಿ ವೆಚ್ಚದಲ್ಲಿ ನಿರ್ಮಾಣಗೊಳ್ಳುತ್ತಿರುವ ಈ ಮಹತ್ವಾಕಾಂಕ್ಷಿ ಯೋಜನೆಯಲ್ಲಿ ತಾಂತ್ರಿಕ ದೋಷಗಳು, ಕಳಪೆ ಸಾಮಗ್ರಿಗಳ ಬಳಕೆ ಹಾಗೂ ಕಾಮಗಾರಿಯ ಗುಣಮಟ್ಟದ ಬಗ್ಗೆ ಆರಂಭದಿಂದಲೇ ಪ್ರಶ್ನೆಗಳು ಎದ್ದಿದ್ದರೂ, ಸಂಬಂಧಪಟ್ಟ ಅಧಿಕಾರಿಗಳು ಮೌನ ವಹಿಸಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.

ಸ್ಥಳೀಯರ ಹೇಳಿಕೆಗಳು ಹಾಗೂ ಸಾಮಾಜಿಕ ಹೋರಾಟಗಾರರ ಮಾಹಿತಿಗಳ ಆಧಾರದ ಮೇಲೆ ಸಂಜೆವಾಣಿ ಕನ್ನಡ ದಿನಪತ್ರಿಕೆ ನಿರಂತರವಾಗಿ ವರದಿಗಳನ್ನು ಪ್ರಕಟಿಸುತ್ತಿದ್ದು, ಕಟ್ಟಡ ಕಾಮಗಾರಿಯ ಲೋಪದೋಷಗಳನ್ನು ಒಂದೊಂದಾಗಿ ಬೆಳಕಿಗೆ ತರುತ್ತಲೇ ಬಂದಿದೆ. ಸಿಮೆಂಟ್ ಮಿಶ್ರಣದ ಗುಣಮಟ್ಟ ಕಳಪೆಯಾಗಿರುವುದು, ತಾಂತ್ರಿಕ ಮಾನದಂಡಗಳನ್ನು ಪಾಲಿಸದೇ ಕೆಲಸ ನಡೆಯುತ್ತಿರುವುದು ಸೇರಿದಂತೆ ಹಲವು ಅಂಶಗಳು ಸಾರ್ವಜನಿಕರಲ್ಲಿ ತೀವ್ರ ಅನುಮಾನಗಳಿಗೆ ಕಾರಣವಾಗಿವೆ.

“ಜನರ ಆರೋಗ್ಯ ಸೇವೆಗೆ ನಿರ್ಮಾಣವಾಗುತ್ತಿರುವ ಆಸ್ಪತ್ರೆಯೇ ಸುರಕ್ಷಿತವಾಗಿರದಿದ್ದರೆ ಭವಿಷ್ಯದಲ್ಲಿ ದೊಡ್ಡ ಅನಾಹುತ ಸಂಭವಿಸುವ ಸಾಧ್ಯತೆ ಇದೆ. ಅಧಿಕಾರಿಗಳು ತಕ್ಷಣ ಹಸ್ತಕ್ಷೇಪ ಮಾಡಿ ಕಾಮಗಾರಿಯ ಗುಣಮಟ್ಟ ಪರಿಶೀಲಿಸಬೇಕು” ಎಂದು ಸ್ಥಳೀಯರು ಆಗ್ರಹಿಸುತ್ತಿದ್ದಾರೆ.

ಇದಕ್ಕೂ ಮಧ್ಯೆ, ಈ ಪ್ರಕರಣ ಮತ್ತೊಂದು ತಿರುವು ಪಡೆದುಕೊಂಡಿದ್ದು, ಕಳಪೆ ಕಾಮಗಾರಿಯ ಬಗ್ಗೆ ವರದಿ ಮಾಡಿದ ಪತ್ರಕರ್ತರ ಮೇಲೂ ಪರೋಕ್ಷ ಒತ್ತಡ ಹೇರುವ ಪ್ರಯತ್ನಗಳು ನಡೆಯುತ್ತಿವೆ ಎಂಬ ಗಂಭೀರ ಆರೋಪಗಳು ಕೇಳಿಬಂದಿವೆ. ಸ್ಥಳೀಯರ ಪ್ರಕಾರ, ಪ್ರಥಮ ಗುತ್ತಿಗೆದಾರ ತಾಯಪ್ಪ ಯಾದವ್ (ಕಾಳೆಬೆಳಗುಂದಿ) ಅವರು, ಕೆಲವು ರಾಜಕೀಯ ಮುಖಂಡರ ಮೂಲಕ ಕರೆ ಮಾಡಿಸಿ “ಈ ವಿಷಯವನ್ನು ಇಲ್ಲಿಗೇ ಮುಚ್ಚಿಹಾಕಿ”, “ಇನ್ನಷ್ಟು ಸುದ್ದಿ ಮಾಡಬೇಡಿ” ಎಂದು ಒತ್ತಡ ಹೇರುವ ಯತ್ನ ನಡೆದಿದೆ ಎಂದು ಆರೋಪಿಸಲಾಗಿದೆ.

ಪತ್ರಿಕೆಯಲ್ಲಿ ಪ್ರಕಟವಾಗುತ್ತಿರುವ ವರದಿಗಳನ್ನು ತಣ್ಣಗಾಗಿಸುವ ಉದ್ದೇಶದಿಂದ ಬೇರೆ ವ್ಯಕ್ತಿಗಳ ಮೂಲಕ ಸಮಾಧಾನಪಡಿಸುವ ಹಾಗೂ ಪ್ರಕರಣವನ್ನು ಮಸುಕುಗೊಳಿಸುವ ಪ್ರಯತ್ನಗಳೂ ನಡೆಯುತ್ತಿವೆ ಎಂಬ ಮಾತುಗಳು ಸಾರ್ವಜನಿಕ ವಲಯದಲ್ಲಿ ವ್ಯಾಪಕ ಚರ್ಚೆಗೆ ಕಾರಣವಾಗಿವೆ. “ಸಾರ್ವಜನಿಕರ ತೆರಿಗೆ ಹಣದಲ್ಲಿ ನಿರ್ಮಾಣವಾಗುತ್ತಿರುವ ಕಟ್ಟಡದ ಗುಣಮಟ್ಟದ ಬಗ್ಗೆ ಪ್ರಶ್ನೆ ಕೇಳಿದವರನ್ನೇ ಟಾರ್ಗೆಟ್ ಮಾಡುವುದು ಪ್ರಜಾಪ್ರಭುತ್ವಕ್ಕೆ ಧಕ್ಕೆಯಾಗಿದೆ. ಸತ್ಯವನ್ನು ಬಹಿರಂಗಪಡಿಸುವವರನ್ನು ಬೆದರಿಸುವ ಪರಿಸ್ಥಿತಿ ನಿರ್ಮಾಣವಾಗಿರುವುದು ಅತ್ಯಂತ ದುಃಖಕರ ಬೆಳವಣಿಗೆಯಾಗಿದೆ” ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ಇದಲ್ಲದೆ, ಕಾಮಗಾರಿಯ ಕುರಿತು ಅನೇಕ ಬಾರಿ ವರದಿಗಳು ಪ್ರಕಟವಾಗಿದ್ದರೂ ಹಾಗೂ ಅಧಿಕಾರಿಗಳಿಗೆ ಮನವಿ ಸಲ್ಲಿಸಿದ್ದರೂ ಯಾವುದೇ ಕ್ರಮ ಕೈಗೊಳ್ಳದೇ ಮೌನ ವಹಿಸಿರುವುದು ಮತ್ತಷ್ಟು ಅನುಮಾನಗಳಿಗೆ ಕಾರಣವಾಗಿದೆ. “ಅಧಿಕಾರಿಗಳು ಎಲ್ಲವನ್ನೂ ನೋಡಿದರೂ ನೋಡದಂತೆ ವರ್ತಿಸುತ್ತಿರುವುದು ವಿಪರ್ಯಾಸ” ಎಂದು ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ.

ಸಮುದಾಯ ಆರೋಗ್ಯ ಕೇಂದ್ರವು ಗ್ರಾಮೀಣ ಭಾಗದ ಸಾವಿರಾರು ಜನರಿಗೆ ಆರೋಗ್ಯ ಸೇವೆ ಒದಗಿಸಬೇಕಿರುವ ಪ್ರಮುಖ ಯೋಜನೆಯಾಗಿರುವುದರಿಂದ, ಕೂಡಲೇ ಉನ್ನತ ಮಟ್ಟದ ತಾಂತ್ರಿಕ ತಂಡದಿಂದ ಸಮಗ್ರ ಪರಿಶೀಲನೆ ನಡೆಸಿ, ಕಾಮಗಾರಿಯ ಗುಣಮಟ್ಟವನ್ನು ಪರೀಕ್ಷಿಸಿ, ತಪ್ಪಿತಸ್ಥ ಗುತ್ತಿಗೆದಾರರು ಹಾಗೂ ನಿರ್ಲಕ್ಷ್ಯ ವಹಿಸಿದ ಅಧಿಕಾರಿಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE